ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 152 RNI Number : KNKAN/25/A2770 10-06-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :152 ರಾಯಚೂರು 10-06-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563

ಉಜ್ವಲ ಸಬ್ಸಿಡಿ ಪ್ರಯೋಜನ ಕಡಿತಗೊಳಿಸಿದ ಕೇಂದ್ರ: ವರ್ಷಕ್ಕೆ 4ಕ್ಕೆ ಇಳಿಕೆ

ನವದೆಹಲಿ: ಕೇಂದ್ರವು ತನ್ನ ಪ್ರಮುಖ ಉಜ್ವಲ ಯೋಜನೆಯ ಫಲಾನುಭವಿಗಳಿಗೆ ವಾರ್ಷಿಕವಾಗಿ ಲಭ್ಯವಿರುವ ಸಬ್ಸಿಡಿ ಅಡುಗೆ ಅನಿಲ ಸಿಲಿಂಡರ್‌ಗಳ ಸಂಖ್ಯೆಯನ್ನು ನಾಲ್ಕಕ್ಕೆ ಇಳಿಕೆ ಮಾಡಿದೆ.

ಮೇ 2016 ರಲ್ಲಿ ಪ್ರಾರಂಭಿಸಲಾದ ಪ್ರಧಾನ ಮಂತ್ರಿ ಉಜ್ವಲ ಯೋಜನೆ (ಪಿಎಂಯುವೈ) ಅಡಿ ಫಲಾನುಭವಿಗಳು ಆರಂಭದಲ್ಲಿ ವರ್ಷಕ್ಕೆ 12 ಸಬ್ಸಿಡಿ 14.2 ಕೆಜಿ ಸಿಲಿಂಡರ್‌ಗಳಿಗೆ ಅರ್ಹರಾಗಿದ್ದರು. ಕಳೆದ ವರ್ಷ ಸಬ್ಸಿಡಿ ಕೋಟಾವನ್ನು ಒಂಬತ್ತು ಸಿಲಿಂಡರ್‌ಗಳಿಗೆ ಇಳಿಸಲಾಗಿತ್ತು ಮತ್ತು ಈಗ ಅದನ್ನು ನಾಲ್ಕಕ್ಕೆ ಇಳಿಕೆ ಮಾಡಲಾಗಿದೆ.

ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ಪ್ರವೀಣ್ ಮಲ್ ಖನೂಜಾ, ಪರಿಷ್ಕೃತ ಅರ್ಹತೆಯು ಉಜ್ವಲ ಫಲಾನುಭವಿಗಳ ಸರಾಸರಿ ವಾರ್ಷಿಕ ಬಳಕೆಗೆ ಹೊಂದಿಕೆಯಾಗುತ್ತದೆ ಎಂದು ಹೇಳಿದ್ದಾರೆ.

ಶುದ್ಧ ಅಡುಗೆ ಇಂಧನದ ಬಳಕೆಯನ್ನು ಉತ್ತೇಜಿಸಲು ಮತ್ತು ಕೈಗೆಟುಕುವಿಕೆಯನ್ನು ಸುಧಾರಿಸಲು, ಸರ್ಕಾರವು ಮೇ 2022 ರಲ್ಲಿ 14.2 ಕೆಜಿ ಎಲ್‌ಪಿಜಿ ಸಿಲಿಂಡರ್‌ಗೆ 200 ರೂ.ಗಳ ಸಬ್ಸಿಡಿ ನೀಡಿತ್ತು. ಇದನ್ನು ವಾರ್ಷಿಕವಾಗಿ 12 ಸಿಲಿಂಡರ್‌ಗಳಿಗೆ ಸಬ್ಸಿಡಿ ನೀಡುತ್ತಿತ್ತು. ಪ್ರತಿ ಸಿಲಿಂಡರ ಖರೀದಿಸಿದ ನಂತರ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಹಣ ಜಮಾ ಮಾಡಲಾಗುತ್ತದೆ. ಅಕ್ಟೋಬರ್ 2023 ರಲ್ಲಿ ಈ ಸಬ್ಸಿಡಿಯನ್ನು 300 ರೂ.ಗಳಿಗೆ ಹೆಚ್ಚಳ ಮಾಡಲಾಗಿತ್ತು. ಈ ಪ್ರಯೋಜನವನ್ನು 5 ಕೆಜಿ ಸಿಲಿಂಡರ್‌ಗಳಗೂ ವಿಸ್ತರಿಸಲಾಗಿತ್ತು.

ನವದೆಹಲಿಯಲ್ಲಿ 14.2 ಕೆಜಿ ಸಿಲಿಂಡರ್‌ನ ಬೆಲೆ ಕಳೆದ ಮೂರು ತಿಂಗಳಲ್ಲಿ ಎರಡು ಬಾರಿ ಹೆಚ್ಚಳವಾಗಿದ್ದು, ಒಟ್ಟು 89 ರೂ.ಗಳಷ್ಟು ಹೆಚ್ಚಾಗಿದೆ. ಜೂನ್ 7ರ ನಂತರದ ಬೆಲೆ 942 ರೂ.ಗಳಾಗಿದೆ. 300 ರೂ. ಸಬ್ಸಿಡಿಯನ್ನು ಲೆಕ್ಕಹಾಕಿದ ನಂತರ, ಪಿಎಂಯುವೈ ಫಲಾನುಭವಿಗಳು 14.2 ಕೆಜಿ ಸಿಲಿಂಡರ್‌ಗೆ 642 ರೂ.ಗಳನ್ನು ಪಾವತಿಸುತ್ತಿದ್ದಾರೆ.

ಫೆಬ್ರವರಿ ಅಂತ್ಯದಲ್ಲಿ ಪಶ್ಚಿಮ ಏಷ್ಯಾದಲ್ಲಿ ಯುದ್ಧ ಆರಂಭವಾದ ನಂತರ ಅಂತಾರಾಷ್ಟ್ರೀಯ ಬೆಲೆಗಳಲ್ಲಿ ಏರಿಕೆಯಾಗಿದೆ. ಹೀಗಾಗಿ ದೇಶೀಯ ಎಲ್‌ಪಿಜಿ ಸಿಲಿಂಡರ್ ಪೂರೈಸುವ ವೆಚ್ಚವು 1,600 ರೂ.ಗಳಿಗಿಂತ ಹೆಚ್ಚಾಗಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ಖನೂಜಾ ಹೇಳಿದ್ದಾರೆ.

ಸರ್ಕಾರವು 2022 ರಿಂದ 52,000 ಕೋಟಿ ರೂ. ಸಬ್ಸಿಡಿ ನೀಡಿದೆ. ಬೆಲೆ ಏರಿಕೆಯ ಹೊರತಾಗಿಯೂ, ತೈಲ ಕಂಪನಿಗಳು 14.2 ಕೆಜಿ ಸಿಲಿಂಡರ್‌ಗೆ ಸುಮಾರು 700 ರೂ. ನಷ್ಟವನ್ನು ಮುಂದುವರೆಸಿವೆ ಎಂದು ಖನೂಜಾ ತಿಳಿಸಿದ್ದಾರೆ. ಎಲ್‌ಪಿಜಿ ಜೊತೆಗೆ ತೈಲ ಕಂಪನಿಗಳು ಪೆಟ್ರೋಲ್ ಮತ್ತು ಡೀಸೆಲ್ ವೆಚ್ಚಕ್ಕಿಂತ ಕಡಿಮೆ ದರದಲ್ಲಿ ಮಾರಾಟ ಮಾಡುವುದರಿಂದಲೂ ನಷ್ಟ ಅನುಭವಿಸುತ್ತಿವೆ ಎಂದು ಅವರು ಬೆಲೆ ಏರಿಕೆಗೆ ಕಾರಣಗಳನ್ನು ನೀಡಿದ್ದಾರೆ.

ಎಲ್‌ಪಿಜಿ ಹೊರತುಪಡಿಸಿ, ತೈಲ ಕಂಪನಿಗಳು ಕಳೆದ ತಿಂಗಳು ನಾಲ್ಕು ಕಂತುಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯನ್ನು ತಲಾ 7.50 ರೂ. ಹೆಚ್ಚಿಸಿವೆ. ಸಿಎನ್‌ಜಿ ದರಗಳನ್ನು ಸಹ ಪ್ರತಿ ಕೆಜಿಗೆ 6 ರೂ. ಹೆಚ್ಚಿಸಲಾಗಿದೆ.



ಇಂಧನ, ಸಿಲಿಂಡರ್ ಬೆಲೆ ಏರಿಕೆ ಖಂಡಿಸಿ ಕಾಂಗ್ರೆಸ್ ಪ್ರತಿಭಟನೆ

ರಾಯಚೂರು, ಜೂ.9-

ಪೆಟ್ರೋಲ್, ಡೀಸೆಲ್ ಸಿಲೆಂಡರ್ ಬೆಲೆ ಏರಿಕೆ ಖಂಡಿಸಿ ಕೇಂದ್ರ ಸರಕಾರ ವಿರುದ್ಧ ಜಿಲ್ಲಾ ಕಾಂಗ್ರೆಸ್ ಮುಖಂಡರು ಪ್ರತಿಭಟನೆ ನಡೆಸಿದರು.

ನಗರದ ಡಾ. ಬಿಆರ್ ಅಂಬೇಡ್ಕರ್ ವೃತ್ತದಲ್ಲಿ ಕೇಂದ್ರ ಸರ್ಕಾರ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.ಫಲಕಗಳನ್ನು ಹಿಡಿದು ಬಿಜೆಪಿ ಮುಖಂಡರ ವಿರುದ್ಧ ವಾಗ್ದಾಳಿ ನಡೆಸಿದರು.

ಕೇಂದ್ರ ಬಿಜೆಪಿ ಸರ್ಕಾರ ನಿರಂತರ ಬೆಲೆ ಏರಿಕೆಯಿಂದ ಮಧ್ಯಮ ವರ್ಗದವರು ಮತ್ತು ಬಡವರ ಬದುಕು ದುಸ್ತರವಾಗಿದೆ. ನರೇಂದ್ರ ಮೋದಿ ನೇತೃತ್ವದ ಕೇಂದ್ರ ಬಿಜೆಪಿ ಸರ್ಕಾರ ಆಚೆ ದಿನ್ ಹೆಸರಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಬಡವರ ಜೇಬಿಗೆ ಬರೆ ಎಳೆದಿದೆ ಎಂದು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.



ವಿಧಾನಪರಿಷತ್ ಸದಸ್ಯರಾದ ಎ.ವಸಂತಕುಮಾರ ಅವರು ಮಾತನಾಡಿ, ಕಳೆದ 12 ವರ್ಷಗಳಿಂದ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಬಿಜೆಪಿ ಸರಕಾರದ ನಿರಂತರ ಬೆಲೆ ಏರಿಕೆಯಿಂದ ದೇಶದ ಜನರು ತತ್ತರಿಸುವಂತಾಗಿದೆ.ಬೆಲೆ ಏರಿಕೆ ಈ ದೇಶದ ಜನರಿಗೆ ಶಾಪವಾಗಿದೆ.ಸುಳ್ಳು ಭರವಸೆಗಳ ಮೂಲಕ ಅಧಿಕಾರಕ್ಕೆ ಕೇಂದ್ರ ಸರಕಾರ ಬಡವರು ಕೂಲಿ ಕಾರ್ಮಿಕರು, ರೈತರ ಯುವ ಜನತೆಯನ್ನು ಆರ್ಥಿಕ ಸಂಕಷ್ಟಕ್ಕೆ ಗುರಿಯಾಗುವಂತೆ ಮಾಡಿದೆ. ಚುನಾವಣಾ ಸಂದರ್ಭದಲ್ಲಿ ನಡೆದ ಘೋಷಣೆಗಳು ಕೇವಲ ಪ್ರಚಾರಕ್ಕೆ ಮಾತ್ರ ಸೀಮಿತವಾಗಿದೆ. ಮೋದಿ ಅವರು ಕಪ್ಪು ಹಣ ತಂದು ಪ್ರತಿಯೊಬ್ಬರ ಬ್ಯಾಂಕ್ ಖಾತೆಗೆ 15 ಲಕ್ಷ ಜಮೆ ಮಾಡಲಾಗುವುದು ಎಂದು ಭರವಸೆ ನೀಡಿದ್ದರು. ಆದರೆ ಭರವಸೆ ಹುಸಿ ಆಗಿದೆ. ಕೇಂದ್ರ ಸರಕಾರ ಸುಳ್ಳು ಹೇಳುವ ಮೂಲಕ ದೇಶದ ಜನರಿಗೆ ವಂಚನೆ ಮಾಡುತ್ತಿದೆ ಎಂದು ಕೇಂದ್ರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.ವರ್ಷಕ್ಕೆ 2 ಕೋಟಿ ಉದ್ಯೋಗ ಭರವಸೆ ನೀಡಿ ಅಧಿಕಾರ ಬಂದ ಮೇಲೆ ದೇಶದ ಯುವಕ ಜನತೆಯನ್ನು ನಿರುದ್ಯೋಗ ಸಮಸ್ಯೆ ಗುರಿಯಾಗುವಂತೆ ಮಾಡಿದೆ. ಬಿಜೆಪಿ ನೇತೃತ್ವದ ಕೇಂದ್ರ ಸರಕಾರ ಬೆಲೆ ಏರಿಕೆ ಮೂಲಕ ಜನರ ಮೇಲೆ ಆರ್ಥಿಕ ಹೊರೆ ಹೆಚ್ಚಿಸಿದರೆ, ರಾಜ್ಯ ಕಾಂಗ್ರೆಸ್ ಸರಕಾರ ಗ್ಯಾರಂಟಿ ಯೋಜನೆಗಳ ಮೂಲಕ ಜನಸಾಮಾನ್ಯರ ಆರ್ಥಿಕ ಹೊರೆ ಇಳಿಸುತ್ತಿದೆ. ತೈಲ ಬೆಲೆ ಏರಿಕೆ ಎಲ್ಲರ ಬದುಕಿಗೆ ಶಾಪವಾಗಿದೆ. ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾತೈಲ ಬೆಲೆ ಕಡಿಮೆಯಿದ್ದರೂ ಇಷ್ಟು ದೊಡ್ಡ ಪ್ರಮಾಣದಲ್ಲಿ ಬೆಲೆ ಏರಿಕೆ ಮಾಡಲಾಗಿದೆ.ಕಚ್ಚಾ ತೈಲ ಬೆಲೆ ಏರಿಕೆ ಕಡಿವಾಣ ಇಲ್ಲದಂತಾಗಿದೆ. ಭ್ರಷ್ಟ ಬಿಜೆಪಿ ಸರ್ಕಾರ ಆಡಳಿತವನ್ನು ದುರ್ಬಲಗೊಳಿಸಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಕೇಂದ್ರ ಸರಕಾರಕ್ಕೆ ಜನಪರ ನಿಲುವು ಇಲ್ಲ ಕೇವಲ ತೆರಿಗೆ ಹೆಸರಲ್ಲಿ ಬೊಕ್ಕಸಕ್ಕ ಲೂಟಿ

3ನೇ ಪುಟ.....

ನಗರ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ ಗುಣಮಟ್ಟದೊಂದಿಗೆ ಪೂರ್ಣಗೊಳಿಸಲು ಜಿಲ್ಲಾಧಿಕಾರಿ ಸೂಚನೆ



ರಾಯಚೂರು, ಜೂ.8-

ನಗರದ ವಿವಿಧ ಪ್ರಮುಖ ಮೂಲಸೌಕರ್ಯ ಹಾಗೂ ಸಾರ್ವಜನಿಕ ಸೇವಾ ಯೋಜನೆ ಗಳಿಗೆ ಜಿಲ್ಲಾಧಿಕಾರಿಗಳು ಭೇಟಿ ನೀಡಿ, ಕೈಗೆತ್ತಿಕೊಳ್ಳಲಾದ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ, ಕಾರ್ಯನಿರ್ವಹಣೆಯ ಗುಣಮಟ್ಟ ಹಾಗೂ ಸಾರ್ವಜನಿಕ ಉಪಯುಕ್ತ ತೆಯನ್ನು ಪರಿಶೀಲಿಸಿದರು.

ಜಿಲ್ಲಾಧಿಕಾರಿಗಳು ರಾಂಪುರ ಕುಡಿಯುವ ನೀರು ಸರಬರಾಜು ಘಟಕ, ಉಸ್ಮಾನಿಯಾ ಮಾರುಕಟ್ಟೆ ಮತ್ತು ಅಮೃತ ನೆರಳು ಯೋಜನೆ, ಸಿಯಾತಲಾಬ್ ಚರಂಡಿ ಅಭಿವೃದ್ಧಿ ಕಾಮಗಾರಿ, ಏಕ್ಲಾಸಪುರ ದ್ರವ ತ್ಯಾಜ್ಯ ನಿರ್ವಹಣಾ ಹಾಗೂ ವಸ್ತು ಮರುಬಳಕೆ ಕೇಂದ್ರ , ಏಕ್ಲಾಸಪುರ ಮಲಿನ ನೀರು ಶುದ್ಧೀಕರಣ ಘಟಕ ಮತ್ತು ನೀರ್ ಬಾವಿ ಕುಂಟೆ ಕೆರೆಗೆ

3ನೇ ಪುಟ.....

ದಿ.11: ಉಮಾಪತಿ ಚುಕ್ಕಿ 50ನೇ ಪುಣ್ಯಸ್ಮರಣೆ ನಿಮಿತ್ಯ ಬಸವತತ್ವ ಚಿಂತನೆಗೋಷ್ಠಿ

ರಾಯಚೂರು, ಜೂ.9-

ಚುಕ್ಕಿ ಪ್ರತಿಷ್ಠಾನ ಸಿರವಾರ ಸಮಿತಿ ವತಿಯಿಂದ ಶ್ರೀ ಉಮಾಪತಿ ಚುಕ್ಕಿಯವರ 50ನೇ ಸುವರ್ಣ ಪುಣ್ಯಸ್ಮರಣೆ ಅಂಗವಾಗಿ ಬಸವತತ್ವ ಚಿಂತನೆ ಗೋಷ್ಠಿಯ ಕಾರ್ಯಕ್ರಮ ಬೆಳಿಗ್ಗೆ 9 ಗಂಟೆಯಿಂದ ಸಂಜೆ 6 ವರೆಗೆ ದಿ.11 ರಂದು ಪಟ್ಟಣದ ಚುಕ್ಕಿ ರುದ್ರಮ್ಮ ಉಮಾಪತೆಪ್ಪ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಚುಕ್ಕಿ ಪ್ರತಿಷ್ಠಾನದ ಅಧ್ಯಕ್ಷರಾದ ಚುಕ್ಕಿ ಸೂಗಪ್ಪ ಸಾಹುಕಾರ ಅವರು ಹೇಳಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡಿ, ಅಂದು11 ಬೆಳಿಗ್ಗೆ 8-30 ರಿಂದ ಶ್ರೀ ಬಸವಾದಿ ಶರಣರ ಪೂಜೆ ನಂತರ ಈಶ್ವರ ದೇವಸ್ಥಾನದಿಂದ ಚುಕ್ಕಿ ರುದ್ರಮ್ಮ ಉಮಾಪತೆಪ್ಪ ಕಲ್ಯಾಣ ಮಂಟಪದವರೆಗೆ ದಾವಣಗೆರೆ



ಬಸವ ಕಲಾ ಬಳಗ ತಂಡದಿಂದ ವಚನ ಭಜನೆಯೊಂದಿಗೆ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಭಾವಚಿತ್ರ ಮೆರವಣಿಗೆ ಜರುಗಲಿದೆ. ನಂತರ 9:30 ಕ್ಕೆ ಚುಕ್ಕಿ ರುದ್ರಮ್ಮ ಉಮಾಪತೆಪ್ಪ ಕಲ್ಯಾಣ ಮಂಟಪದಲ್ಲಿಷಟಸ್ಥಲ ಧ್ವಜಾರೋಹಣ ಕಾರ್ಯಕ್ರಮ ನಡೆಯಲಿದೆ. ಸುವರ್ಣ ಪುಣ್ಯ ಸ್ಮರಣಾರ್ಥ ಅಂಗವಾಗಿ ಹಂಪಿ ಕನ್ನಡ ವಿಶ್ವವಿದ್ಯಾಲಯ ನಿವೃತ್ತ ಪ್ರಾಧ್ಯಾಪಕರು ದಡ ಸೇರಿಸು ತಂದೆ ಕೃತಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಡಾ.ಅಮರೇಶ ನುಗಡೋಣಿ ಅವರಿಗೆ ಪ್ರತಿಷ್ಠಾನದಿಂದ ವಿಶೇಷ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು. 2026-27 ಸಾಲಿನ ಪ್ರಶಸ್ತಿ ಪುರಸ್ಕೃತರು ಪ್ರೊ. ಹೆಚ್. ಟಿ ಪೋತೆ ಅವರ ಮಹಾಯಾನ ಹಾಗೂ ಪ್ರಹ್ಲಾದ್ ಗುಡಿ ಸಿಂಧನೂರು ಅವರ ಕೃತಿ ನಾಕಂಡ ನಮ್ಮವರು ಕೃತಿಯ ಕುರಿತು ಸಂವಾದ ನಡೆಯಲಿದೆ ಎಂದರು.

ಕಾರ್ಯಕ್ರಮದ ದಿವ್ಯಾ ಸನ್ನಿದ್ಯಾವನ್ನು ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣ ಅವರು

3ನೇ ಪುಟ.....

ಪ್ರವಾಸೋದ್ಯಮ ವೃದ್ಧಿಗೆ ಮೂಲ ಸೌಕರ್ಯ ಅಭಿವೃದ್ಧಿಗೆ ಪೂವಿತಾ ಸೂಚನೆ

ರಾಯಚೂರು, ಜೂ.8-

ಜಿಲ್ಲೆಯ ಐತಿಹಾಸಿಕ, ಪೌರಾಣಿಕ ಹಾಗೂ ಪ್ರಾಕೃತಿಕ ವೈಶಿಷ್ಟಗಳಿಂದ ಹೆಸರುವಾಸಿಯಾಗಿರುವ ನಾರದಗಡ್ಡೆಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿ ಪ್ರವಾಸೋದ್ಯಮ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪರಿಶೀಲನೆ ವೇಳೆ ಮಾತನಾಡಿದ ಅವರು, ನಾರದಗಡ್ಡೆಯು ವಿಶಿಷ್ಟ ಪ್ರಾಕೃತಿಕ ಸೌಂದರ್ಯ ಮತ್ತು ಧಾರ್ಮಿಕ ಮಹತ್ವವನ್ನು ಹೊಂದಿರುವ ಪ್ರಮುಖ ಪ್ರವಾಸಿತಾಣವಾಗಿದೆ. ಇಲ್ಲಿನ ಶ್ರೀ ಚನ್ನಬಸವೇಶ್ವರ ದೇವಸ್ಥಾನ ನಾರದ ಮುನಿಗಳು ತಪಸ್ಸು ಮಾಡಿದ ಸ್ಥಳವೆಂಬ ನಂಬಿಕೆಯಿಂದ ಭಕ್ತರ ಆಕರ್ಷಣೆಯ



ಕೇಂದ್ರವಾಗಿದೆ ಎಂದು ತಿಳಿಸಿದರು.

ಕರ್ನಾಟಕ, ಮಹಾರಾಷ್ಟ್ರ, ಆಂಧ್ರಪ್ರದೇಶ, ತೆಲಂಗಾಣ ಹಾಗೂ ಗೋವಾ ರಾಜ್ಯಗಳಿಂದ ಸಾವಿರಾರು ಭಕ್ತರು ಮತ್ತು ಪ್ರವಾಸಿಗರು ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸುವ ಕುರಿತು ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಸ್ಥಳದಲ್ಲಿಯೇ ನಿರ್ದೇಶನ ನೀಡಿದರು.

ನಾರದಗಡ್ಡೆ ಸೇತುವೆಯಿಂದ ಕುರುವಕೂಲ್ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು ತುರ್ತಾಗಿ ದುರಸ್ತಿಗೊಳಿಸುವಂತೆ ಸೂಚಿಸಿದ

3ನೇ ಪುಟ.....



ಸಿಂಧನೂರಿನ :ಅಭಿವೃದ್ಧಿಗೆ ಶಾಸಕರಿಂದ ಮತ್ತೊಂದು ಮಹತ್ವದ ಹೆಜ್ಜೆ

ಸಿಂಧನೂರು,ಜೂ.09-

ಸಿಂಧನೂರಿನ ಪಿ ಡಬ್ಲ್ಯೂ ಡಿ.ಕ್ಯಾಂಪ್ ನಿಂದ ರಾಯಚೂರಿನ ಏಳನೇ ಮೈಲ್ ವರೆಗಿನ ಚತುಸ್ಪತ. (ಫೋರ್ ವೇ) ಹೆದ್ದಾರಿ ಕಾಮಗಾರಿಯನ್ನು ಶಾಸಕ ಹಂಪನಗೌಡ ಬಾದರ್ಲಿ ಅವರು ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಿದರು.

ಈ ವೇಳೆ ಅಧಿಕಾರಿಗಳೊಂದಿಗೆ ಚರ್ಚಿಸಿದ ಅವರು. ನಗರದ ಪ್ರಮುಖ ಗುರುತಾಗಿರುವ. ಡಾಕ್ಟರ್ ಬಿ.ಆರ್. ಅಂಬೇಡ್ಕರ್ ವೃತ್ತವನ್ನು ಅತ್ಯಂತ ಸುಂದರವಾಗಿ. ಆಧುನಿಕ ಸೌಲಭ್ಯಗಳೊಂದಿಗೆ. ಅಚ್ಚುಕಟ್ಟಾಗಿ ಅಭಿವೃದ್ದಿ ಪಡಿಸುವಂತೆ ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಾರ್ವಜನಿಕರಿಗೆ ಗುಣಮಟ್ಟದ ರಸ್ತೆ ಹಾಗೂ ಮೂಲಭೂತ ಸೌಕರ್ಯ ಕಲ್ಪಿಸುವುದು ಸರಕಾರದ ಪ್ರಮುಖ ಆದ್ಯತೆಯಾಗಿದ್ದು. ಕಾಮಗಾರಿ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಬೇಕು. ಗುಣಮಟ್ಟದ ಕಾಮಗಾರಿ ನಿರ್ವಹಿಸಬೇಕು.ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಈ ಸಂದರ್ಭದಲ್ಲಿ ಕೆಆರ್ ಡಿ.ಸಿ.ಎಲ್. ಇ ಇ. ಮುರಳಿಧರನ. ಎ ಇ. ಅಶೋಕ್. ಸಿಂಧನೂರು ನಗರಸಭೆ ಪೌರಾಯುಕ್ತರು. ಪಾಂಡುರಂಗ ಇಟಗಿ. ಡಿವೈಎಸ್ಪಿ ಚಂದ್ರಶೇಖರ್. ಸಿ. ಪಿ. ಐ.ವೀರರೆಡ್ಡಿ. ಪಿ ಐ ವಿನಾಯಕ. ನಗರ ಸಭೆ. ಎ. ಇ. ಮಹಾದೇವ ಪ್ರವೀಣ. ಮುಖಂಡರಾದ

3ನೇ ಪುಟ.....

ನಾಳೆ ಟಿ.ಎ. ನಾರಾಯಣಗೌಡರ 60ನೇ ಜನ್ಮದಿನಾಚರಣೆ

ಜಿಲ್ಲೆಯಲ್ಲಿ ಸಮಾಜಮುಖಿ ಕಾರ್ಯಕ್ರಮ-ವಿನೋದ ರೆಡ್ಡಿ

ರಾಯಚೂರು,ಜೂ.09-

ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷರಾದ ಟಿ.ಎ. ನಾರಾಯಣಗೌಡರ 60ನೇ ಜನ್ಮದಿನಾಚರಣೆಯ ಅಂಗವಾಗಿ ದಿನಾಂಕ 10-06-2026 ರಂದು ರಾಯಚೂರು ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ವಿವಿಧ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮಗಳ ವಿವರ ಹೀಗಿದೆ:

ರಾಯಚೂರು ಜಿಲ್ಲಾ ಘಟಕದ ವತಿಯಿಂದ ರಿಮ್ಸ್ ಬೋಧಕ ಆಸ್ಪತ್ರೆಯಲ್ಲಿ ಬಡ ರೋಗಿಗಳಿಗೆ ಜಿಲ್ಲಾ ಅಧ್ಯಕ್ಷರಾದ ಶ್ರೀ ಎಂ. ವಿನೋದ್ ರೆಡ್ಡಿ ಅವರ ನೇತೃತ್ವದಲ್ಲಿ ಹಾಗೂ ಜಿಲ್ಲಾ ಪದಾಧಿಕಾರಿಗಳು ಮತ್ತು ಕಾರ್ಯಕರ್ತರ ಸಮ್ಮುಖದಲ್ಲಿ ಹಣ್ಣು-ಹಂಪಲು ವಿತರಣೆ.

ದೇವದುರ್ಗ ತಾಲೂಕು ಅಧ್ಯಕ್ಷರಾದ ಶ್ರೀ ನಂದಪ್ಪ ಮಡ್ಡಿ ಅವರ ನೇತೃತ್ವದಲ್ಲಿ ದೇವದುರ್ಗ ಸಾರ್ವಜನಿಕ ಆಸ್ಪತ್ರೆಯ ಬಡ ರೋಗಿಗಳಿಗೆ ಹಣ್ಣು-ಹಂಪಲು ವಿತರಣೆ.

ಅರಕೆರೆ ತಾಲೂಕು ಅಧ್ಯಕ್ಷರಾದ ಶ್ರೀ ರಂಗಣ್ಣ ಗಾಲಿ ಅವರ ನೇತೃತ್ವದಲ್ಲಿ ಅರಕೆರೆ ಸಾರ್ವಜನಿಕ ಆಸ್ಪತ್ರೆಯ ರೋಗಿಗಳಿಗೆ ಹಣ್ಣು-ಹಂಪಲು ವಿತರಣೆ.

ಮಸ್ಕಿ ಘಟಕದ ಮುಖಂಡರಾದ ಶ್ರೀ ದುರುಗರಾಜ ವಟಗಲ್ ಅವರ ನೇತೃತ್ವದಲ್ಲಿ ಕರ್ನಾಟಕ ಪಬ್ಲಿಕ್ ಸ್ಕೂಲ್, ಮಸ್ಕಿಯಲ್ಲಿ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕಗಳ ವಿತರಣೆ.



ಲಿಂಗಸುಗೂರು ತಾಲೂಕಿನಲ್ಲಿ ಶ್ರೀ ರುದ್ರಯ್ಯ ಸ್ವಾಮಿ ಅವರ ನೇತೃತ್ವದಲ್ಲಿ ಸರ್ಕಾರಿ ಶಾಲಾ ಮಕ್ಕಳಿಗೆ ನೋಟ್ ಪುಸ್ತಕಗಳ ವಿತರಣೆ.

ಮಾನ್ವಿ ತಾಲೂಕಿನಲ್ಲಿ ಶ್ರೀ ಬಸನಗೌಡ ಅವರ ನೇತೃತ್ವದಲ್ಲಿ ಸರ್ಕಾರಿ ಶಾಲಾ ಮಕ್ಕಳಿಗೆ ನೋಟ್ ಪುಸ್ತಕ ಹಾಗೂ ಪೆನ್ನುಗಳ ವಿತರಣೆ.

ಸಿಂಧನೂರು ತಾಲೂಕಿನಲ್ಲಿ ಶ್ರೀ ರಾಜಸಾಬ್ ಅವರ ನೇತೃತ್ವದಲ್ಲಿ ಕಾರುಣ್ಯ ಅನಾಥಾಶ್ರಮದ ಮಕ್ಕಳಿಗೆ ಊಟದ ವ್ಯವಸ್ಥೆ.

ಕನ್ನಡ ನಾಡು, ನುಡಿ, ನೆಲ, ಜಲ ಮತ್ತು ಗಡಿ ರಕ್ಷಣೆಯ ಹೋರಾಟಗಳಲ್ಲಿ ಹಲವು ದಶಕಗಳಿಂದ ಮುಂಚೂಣಿಯಲ್ಲಿ ನಿಂತಿರುವ ಟಿ.ಎ. ನಾರಾಯಣಗೌಡ ಅವರು ಕನ್ನಡಿಗರ ಹಕ್ಕುಗಳಿಗಾಗಿ ಅನೇಕ ಹೋರಾಟಗಳನ್ನು ನಡೆಸಿ ಜೈಲು ವಾಸವನ್ನೂ ಅನುಭವಿಸಿದ್ದಾರೆ. ಅವರ ಹೋರಾಟದ ಬದುಕು ಕನ್ನಡಿಗರಿಗೆ ಸ್ಫೂರ್ತಿದಾಯಕವಾಗಿದೆ.

ಅವರ ನೇತೃತ್ವದಲ್ಲಿ ಬೆಳೆದಿರುವ ಕರ್ನಾಟಕ ರಕ್ಷಣಾ ವೇದಿಕೆಯ ಕಾರ್ಯಕರ್ತರು ಕನ್ನಡದ ಅಭಿಮಾನ, ಸ್ವಾಭಿಮಾನ ಮತ್ತು ಸೇವಾ ಮನೋಭಾವವನ್ನು ಸಮಾಜದಲ್ಲಿ ಬಿತ್ತುವ ಕೆಲಸ ಮಾಡುತ್ತಿದ್ದು, ಅವರ 60ನೇ ಜನ್ಮದಿನವನ್ನು ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ.

ಇಂತಹ ನೂರಾರು ಟಿ.ಎ. ನಾರಾಯಣಗೌಡ'ರಂ ಕರ್ನಾಟಕದಲ್ಲಿ ಹುಟ್ಟಿದರೆ, ನಾಡು ನಿಜವಾದ ಸುವರ್ಣ ಕರ್ನಾಟಕ 'ವಾಗಲಿದೆ

ಕಾರ್ಯಕ್ರಮದ ಸಮಯ: ದಿನಾಂಕ: 10-06-2026ಸಮಯ:

3ನೇ ಪುಟ.....

ಯೋಗದಿದ ರೋಗಮುಕ್ತ ಜೀವನ ಸಾಧ್ಯ: ಆಶಾಲತಾ



ಬಳ್ಳಾರಿ,ಜೂ.09

ಯೋಗ ಸನಾತನ ಋಷಿ ಪರಂಪರೆ ಮನುಕುಲಕ್ಕೆ ನೀಡಿದ ಅತ್ಯಮೂಲ್ಯ ಕೊಡುಗೆಯಾಗಿದ್ದು, ಜೀವನದಲ್ಲಿ ಯೋಗ ಮತ್ತು ಪ್ರಕೃತಿ ಚಿಕಿತ್ಸೆ ಅಳವಡಿಸಿಕೊಳ್ಳುವುದರಿಂದ ರೋಗಮುಕ್ತ ಜೀವನ ಸಾಗಿಸಲು ಸಾಧ್ಯ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಆಶಾಲತಾ ಸೋಮಪ್ಪ ಅವರು ಹೇಳಿದರು.

ವಿಜಯನಗರ ಕೃಷ್ಣದೇವರಾಯ ವಿಶ್ವವಿದ್ಯಾನಿಲಯದ ನಂದಿಹಳ್ಳಿ ಸ್ನಾತಕೋತ್ತರ ಕೇಂದ್ರದಲ್ಲಿ ಹರಪನಹಳ್ಳಿಯ ಜನನಿ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರದ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ ಉಚಿತ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಯೋಗ ಮತ್ತು ಸಹಜ ಜೀವನದ ಮಹತ್ವವನ್ನು ನಾವಿಂದು ಮರೆತಿದ್ದೇವೆ. ಆದರೆ ಪಾಶ್ಚಾತ್ಯರು ಇದನ್ನು ಅಳವಡಿಸಿಕೊಳ್ಳುತ್ತಿದ್ದಾರೆ. ಇದರಿಂದಾಗಿಯೇ ಯೋಗ ಇಂದು ವಿಶ್ವಮಾನ್ಯತೆ ಪಡೆದು ಎಲ್ಲೆಡೆ ಜನಪ್ರಿಯವಾಗುತ್ತಿದೆ. ನಾವು ಇನ್ನಾದರೂ ಎಚ್ಚೆತ್ತುಕೊಂಡು ಒತ್ತಡದ ಜೀವನದಲ್ಲಿ ದಿನಕ್ಕೆ ಒಂದು ಗಂಟೆಯನ್ನಾದರೂ ಯೋಗ- ಧ್ಯಾನಕ್ಕೆ ಮೀಸಲಿಡಬೇಕು ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಕೇಂದ್ರದ ನಿರ್ದೇಶಕ ಪ್ರೊ.ಎಚ್.ತಿಪ್ಪೇಸ್ವಾಮಿ ಅವರು ಮಾತನಾಡಿ, ಭಾರತ ಜ್ಞಾನ ಪರಂಪರೆಗೆ ಹೆಸರಾದ ದೇಶ. ಚರಕ, ಸುಶ್ರುತರಂಥ ಮಹಾಯೋಗಿಗಳು ಇಡೀ ವಿಶ್ವಕ್ಕೆ ಅಪೂರ್ವ ಆಯುರ್ವೇದ ವೈದ್ಯವಿಜ್ಞಾನವನ್ನು ಪರಿಚಯಿಸಿದ್ದಾರೆ. ಆದರೆ ಪ್ರಕೃತಿ ಚಿಕಿತ್ಸೆ ನಮ್ಮ ಆರೋಗ್ಯವನ್ನು ನಾವೇ ಅರ್ಥ ಮಾಡಿಕೊಂಡು ಜೀವನಶೈಲಿಯನ್ನು ಮಾರ್ಪಡಿಸಿಕೊಳ್ಳುವುದಕ್ಕೆ ಸಂಬಧಿಸಿದ್ದು. ಉತ್ತಮ ಆಹಾರ- ವಿಹಾರ, ಆಚಾರ- ವಿಚಾರದೊಂದಿಗೆ ಶಿಸ್ತುಬದ್ಧ ಜೀವನಶೈಲಿಯನ್ನು ಅಳವಡಿಸಿಕೊಂಡು ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು ಎಂದು ಹೇಳಿದರು.

ಆಸ್ಪತ್ರೆಯ ನಿರ್ದೇಶಕ ಮತ್ತು ಮುಖ್ಯ ವೈದ್ಯಾಧಿಕಾರಿ ಡಾ.ರಾಜೇಶ್ ಪಾದೇಕಲ್ ಅವರು ಮಾತನಾಡಿ, ಪಾಶ್ಚಾತ್ಯ ಜೀವನಶೈಲಿಯ ಅಂಧಾನುಕರಣೆಯಿದ ಭಾರತದಲ್ಲಿ ಜೀವನಶೈಲಿ ರೋಗಗಳು ಅಪಾಯಕಾರಿ ಪ್ರಮಾಣದಲ್ಲಿ ಹೆಚ್ಚುತ್ತಿವೆ. ನಮ್ಮ ಆರೋಗ್ಯ ಕಾಪಾಡಿಕೊಳ್ಳಲು ಪ್ರಕೃತಿ ನಮಗೆ ನೀಡಿದ ಅನೇಕ ಅಂಶಗಳನ್ನು ನಾವಿಂದು ಮರೆತಿದ್ದೇವೆ. ಔಷಧ ರಹಿತವಾಗಿ ನಮ್ಮ ಜೀವನಶೈಲಿ ಮಾರ್ಪಡಿಸಿಕೊಳ್ಳುವ ಮೂಲಕ ಮರೆತ ಅಂಶಗಳನ್ನು ನಮಗೆ ಪ್ರಕೃತಿ ಚಿಕಿತ್ಸಾ ಪದ್ಧತಿ ನೆನಪಿಸುತ್ತಿದೆ. ಈ ಬಗ್ಗೆ ಸಮಾಜದಲ್ಲಿ ಹೆಚ್ಚಿನ ಜಾಗೃತಿ ಮೂಡಿದಾಗ ಮಾತ್ರ ಆರೋಗ್ಯವಂತ ಸಮಾಜ ನಿರ್ಮಾಣ ಸಾಧ್ಯ ಎಂದು ತಿಳಿಸಿದರು.

ಉತ್ತಮ ಆಹಾರ ಪದ್ಧತಿ ಅನುಸರಿಸುವ ಜೊತೆಗೆ ಯೋಗ, ಪ್ರಾಣಾಯಾಮ, ಧ್ಯಾನದಂಥ ಅಭ್ಯಾಸಗಳನ್ನು ರೂಢಿಸಿಕೊಳ್ಳುವ ಮೂಲಕ ಜೀವನಶೈಲಿ ರೋಗಗಳು ಬಾರದಂತೆ ತಡೆಯಬಹುದು. ತುರ್ತು ಹಾಗೂ ಶಸ್ತಚಿಕಿತ್ಸೆ ಹೊರತುಪಡಿಸಿ ಎಲ್ಲ ರೋಗಗಳಿಗೆ ಈ ಔಷಧಿ ರಹಿರ ವೈದ್ಯಪದ್ಧತಿಯಲ್ಲಿ ಚಿಕಿತ್ಸೆ ಇದ್ದು, ಇದರ ಪ್ರಯೋಜನ ಪಡೆದು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳುವ ಮೂಲಕ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದು ಹೇಳಿದರು.

ಭಾರತೀಯ ಆಹಾರ- ವಿಹಾರ, ಆಚಾರ- ವಿಚಾರಗಳು ಮನೋದೈಹಿಕ ಆರೋಗ್ಯಕ್ಕೆ ಪೂರಕ. ಮನಸ್ಸು ಮತ್ತು ದೇಹದ ಸಮತೋಲನ ಕಾಪಾಡಿಕೊಳ್ಳುವುದೇ ಉತ್ತಮ ಆರೋಗ್ಯದ ಗುಟ್ಟು ಎಂದು ಆಧುನಿಕ ವಿಜ್ಞಾನವೂ ಒಪ್ಪಿಕೊಳ್ಳುತ್ತದೆ ಎಂದರು.

ವಿವಿ ಕ್ರೀಡಾ ನಿರ್ದೇಶಕ ಡ.ಶಶಿಧರ ಕೆಲ್ಲೂರ್ ಅವರು ಮಾತನಾಡಿ, ತಕ್ಷಣಕ್ಕೆ ಶಮನ ನೀಡುವ ಅಲೋಪತಿ ವೈದ್ಯಪದ್ಧತಿಯ ಅಡ್ಡ ಪರಿಣಾಮಗಳ ಹಿನ್ನೆಲೆಯಲ್ಲಿ ಜನ ಇಂದು ಕೈಗೆಟುಕುವ ಮತ್ತು ಸಹಜ ಚಿಕಿತ್ಸಾ ವಿಧಾನವಾದ ಪ್ರಕೃತಿ ಚಿಕಿತ್ಸೆ ಯತ್ತ ವಾಲುತ್ತಿದ್ದಾರೆ. ಮಧ್ಯ ಕರ್ನಾಟಕದಲ್ಲೇ ಅತ್ಯುತ್ತಮ ಪ್ರಕೃತಿ ಸೌಲಭವನ್ನು ಇದೀಗ ಜನನಿ ಆಸ್ಪತ್ರೆ ಕಲ್ಪಿಸಿಕೊಟ್ಟಿದ್ದು, ಈ ಭಾಗದ ಜನತೆ ಇದರ ಪ್ರಯೋಜನ ಪಡೆಯಬೇಕು ಎಂದು ಮನವಿ ಮಾಡಿದರು. ಜನನಿ ಸಮೂಹ ಸಂಸ್ಥೆಗಳ ಸಾರ್ವಜನಿಕ ಸಂಪರ್ಕ ಮುಖ್ಯಸ್ಥ ಉದಯ ಶಂಕರ ಭಟ್, ಸ್ನಾತಕೋತ್ತರ ಕೇಂದ್ರದ ಸಹಾಯಕ ಕ್ರೀಡಾ ನಿರ್ದೇಶಕ ಶಿವರಾಮಪ್ಪರಾಗಿ, ಕ್ರೀಡಾ ಸಹಾಯಕ ಪಾಪಯ್ಯ ಕಣಿವೆಹಳ್ಳಿ ಉಪಸ್ಥಿತರಿ ದ್ದರು. ಡಾ.ಮಲ್ಲಯ್ಯ ಕಾರ್ಯಕ್ರಮ ನಿರೂಪಿಸಿದರು. 150ಕ್ಕೂ ಹೆಚ್ಚು ಮಂದಿ ಶಿಬಿರದಲ್ಲಿ ಭಾಗವಹಿಸಿದ್ದರು.

ಎಂ.ಆರ್.ಪಿ.ಗಿಂತ ಹೆಚ್ಚಿನ ದರಕ್ಕೆ ರಸಗೊಬ್ಬರ ಮಾರಾಟ ಮಾಡಿದರೆ ಲೈಸೆನ್ಸ್ ರದ್ದು: ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಎಚ್ಚರಿಕೆ



ಕಲಬುರಗಿ,ಜೂ.09-

ನಿಗದಿಪಡಿಸಿದ ಎಂ.ಆರ್.ಪಿ. ದರಕ್ಕಿಂತ ಹೆಚ್ಚಿನ ದರಕ್ಕೆ ರಸಗೊಬ್ಬರ ಮಾರಾಟ ಮಾಡಿದಲ್ಲಿ ಅಂತಹ ರಸಗೊಬ್ಬರ ಅಂಗಡಿಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳುವುದಲ್ಲದೆ ಅಂತಹ ಕೃಷಿ ಪರಿಕರ ಮಾರಾಟ ಅಂಗಡಿಗಳ ಪರವಾನಿಗೆ ಸಹ ರದ್ದುಪಡಿಸಲಾಗುವುದು ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ತಿಳಿಸಿದರು.

ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ರಸಗೊಬ್ಬರ ಅಂಗಡಿಗಳ ಡೀಲರ್ ರಿಟೇಲರ್ ಹಾಗೂ ಕೃಷಿ ಇಲಾಖೆ ಅಧಿಕಾರಿಗಳ ತುರ್ತು ಸಭೆ ಕರೆದ ಅವರು, ಅಲ್ಲಲ್ಲಿ ರಸಗೊಬ್ಬರ ಹೆಚ್ಚಿನ ಮಾರಾಟಕ್ಕೆ ಮಾಡಲಾಗುತ್ತಿದೆ ಎಂದು ರೈತರಿಂದ ದೂರು ಬರುತ್ತಿವೆ, ಇದನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಡಿಎಪಿ 50 ಕೆ.ಜಿ. ಬ್ಯಾಗಿಗೆ 1,350 ರೂ., ಯೂರಿಯಾ 45 ಕೆ.ಜಿ. ಬ್ಯಾಗಿಗೆ 266 ರೂ. ಎಂ.ಆರ್.ಪಿ. ದರವಿದ್ದು, ಇದಕ್ಕಿಂತ ಹೆಚ್ಚಿನ ದರ ಪಡೆದರೆ ಕ್ರಮ ಕೈಗೊಳ್ಳುವುದಾಗಿ ಹೇಳಿದರು.

ರಸಗೊಬ್ಬರ ಸಮಸ್ಯೆ ಕುರಿತು ರೈತರ ಅಹವಾಲು ಆಲಿಸಲು ಕೂಡಲೆ ಸಹಾಯವಾಣಿ ಸ್ಥಾಪಿಸಬೇಕು. ಪ್ರಸ್ತುತ ಬೇಡಿಕೆ ಅನುಗುಣವಾಗಿ ಡಿ.ಎ.ಪಿ. ಸೇರಿ ಇತರೆ ರಸಗೊಬ್ಬರಗಳನ್ನು ತಾಲೂಕಿಗೆ ಮರು ಹಂಚಿಕೆ ಮಾಡಬೇಕು. ಪ್ರತಿನಿತ್ಯ ಪಿ.ಓ.ಎಸ್., ಸ್ಟಾಕ್ ಅಪಡೇಟ್ ಮಾಡುವಂತೆ ಸಂಬಂಧಿಸಿದವರಿಗೆ ಸೂಕ್ತ ನಿರ್ದೇಶನ ನೀಡುವಂತೆ ಮತ್ತು ಪ್ರತಿ ದಿನದ ವರದಿ ತಮಗೆ ಸಲ್ಲಿಸುವಂತೆ ಜಂಟಿ ಕೃಷಿ ನಿದೇಶಕರಿಗೆ ಡಿಸಿ ಸೂಚಿಸಿದರು.

ಚಿತ್ತಾಪುರ ಪಟ್ಟಣದಲ್ಲಿ ರಸಗೊಬ್ಬರ ಹೆಚ್ಚಿನ ದರಕ್ಕೆ ಮಾರಾಟ ಮಾಡಲಾಗುತ್ತಿದೆ ಎಂದು ಪತ್ರಿಕೆಯಲ್ಲಿ ಸುದ್ದಿ ಬಂದಿದೆ. ಈ ಕುರಿತು ಸತ್ಯಾಸತ್ಯತೆ ಪರಿಶೀಲಿಸಿ ಕೂಡಲೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಸಹಾಯಕ ಕೃಷಿ ನಿರ್ದೇಶಕ ಸಂಜೀವ ಕುಮಾರ್ ಅವರಿಗೆ ಸೂಚಿಸಿದರು.

ಪ್ರೊಬೇಷನರಿ ಐ.ಎ.ಎಸ್. ಅಧಿಕಾರಿ ಶಿಖರ್ ಮೋಘಾ, ಕೃಷಿ ಉಪನಿರ್ದೇಶಕಿ ಅನುಸೂಯಾ ಹೂಗಾರ ಸೇರಿದಂತೆ ತಾಲೂಕಿನ ಸಹಾಯಕ ನಿರ್ದೇಶಕರು, ರೈತ ಸಂಪರ್ಕ ಕೇಂದ್ರದ ಅಧಿಕಾರಿಗಳು, ರಸಗೊಬ್ಬರ ವಿತರಕರಾದ ಡೀಲ್ರ, ರಿಟೇಲ್ರ, ರಸಗೊಬ್ಬರ ಕಂಪನಿ ಪ್ರತಿನಿಧಿಗಳು ಸಭೆಯಲ್ಲಿ ಭಾಗವಹಿಸಿದ್ದರು.

ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್‌ರಿಗೆ ನಿಂದಿಸಿದ ಆರೋಪಿಗಳ ಬಂಧನಕ್ಕೆ ಬಿಜೆಪಿ ಆಗ್ರಹ



ಕಲಬುರಗಿ,ಜೂ.09-

ಬಿಜೆಪಿ ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್ (ಅಪ್ಪುಗೌಡ) ರೇವೂರ ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿರುವ 18 ಕಿಡಿಗೇಡಿಗಳ ವಿರುದ್ಧ ತಕ್ಷಣ ಪ್ರಕರಣ ದಾಖಲಿಸಬೇಕು ಎಂದು ಆಗ್ರಹಿಸಿರುವ ಜಿಲ್ಲಾ ಬಿಜೆಪಿ, ಸರ್ಕಾರಕ್ಕೆ ಮೂರು ದಿನಗಳ ಗಡುವು ನೀಡಿದೆ. ನಿಗದಿತ ಅವಧಿಯಲ್ಲಿ ಕ್ರಮ ಕೈಗೊಳ್ಳದಿದ್ದರೆ ವಾರದೊಳಗೆ 10 ಸಾವಿರಕ್ಕೂ ಹೆಚ್ಚು ಕಾರ್ಯಕರ್ತರೊಂದಿಗೆ ನಗರದಲ್ಲಿ ತೀವ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದೆ.

ನಗರದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬಿಜೆಪಿ ಜಿಲ್ಲಾ ಗ್ರಾಮೀಣ ಘಟಕದ ಅಧ್ಯಕ್ಷ ಅಶೋಕ ಬಗಲಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ಜೂನ್ 1ರಂದು ನಡೆದ ಪ್ರತಿಭಟನಾ ರ್‍ಯಾಲಿಯಲ್ಲಿ ದತ್ತಾತ್ರೇಯ ಪಾಟೀಲ್ ರೇವೂರ ಅವರು ಕೇವಲ ಹಿಂದಿನ ರಾಜಕೀಯ ಬೆಳವಣಿಗೆಗಳನ್ನು ಉಲ್ಲೇಖಿಸಿ ಮಾತನಾಡಿದ್ದರು. ಆದರೆ ಅವರ ಭಾಷಣವನ್ನು ಉದ್ದೇಶಪೂರ್ವಕವಾಗಿ ತಪ್ಪಾಗಿ ಅರ್ಥೈಸಿ, ಸಮಾಜದಲ್ಲಿ ಅಶಾಂತಿ ಸೃಷ್ಟಿಸುವ ಪ್ರಯತ್ನದ ಭಾಗವಾಗಿ ಸುಳ್ಳು ಆರೋಪಗಳನ್ನು ಮಾಡಿ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಆರೋಪಿಸಿದ್ದಾರೆ.

ಕಾಂಗ್ರೆಸ್ ಪಕ್ಷದ ಕೆಲ ಪಾಲಿಕೆ ಸದಸ್ಯರು ಮತ್ತು ಕಾರ್ಯಕರ್ತರು ನಗರದ ಜಗತ್ ವೃತ್ತದಿಂದ ರೈಲ್ವೆ ನಿಲ್ದಾಣದವರೆಗೆ ಯಾವುದೇ ಪೂರ್ವಾನುಮತಿಯಿಲ್ಲದೆ ಬೈಕ್ ರ್‍ಯಾಲಿ ನಡೆಸಿ ಸಾರ್ವಜನಿಕರಲ್ಲಿ ಆತಂಕದ ವಾತಾವರಣ ನಿರ್ಮಿಸಿದ್ದಾರೆ. ಅಲ್ಲದೆ, ರೇವೂರ ವಿರುದ್ಧ ಅವಾಚ್ಯವಾಗಿ ನಿಂದಿಸಿ ಜೀವ ಬೆದರಿಕೆ ಹಾಕಿರುವ ವಿಡಿಯೊಗಳು ಮತ್ತು ಪೋಸ್ಟ್‌ಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ. ಈ ಕುರಿತು ದೂರು ನೀಡಲು ಹೋದರೂ ಪೊಲೀಸರು ಪ್ರಕರಣ ದಾಖಲಿಸಲು ಮುಂದಾಗುತ್ತಿಲ್ಲ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಕಲಬುರಗಿ ಗ್ರಾಮೀಣ ಕ್ಷೇತ್ರದ ಶಾಸಕ ಬಸವರಾಜ ಮತ್ತಿಮಡು ಮಾತನಾಡಿ, ''ರೇವೂರ ವಿರುದ್ಧ ಕಾಂಗ್ರೆಸ್ ಮುಖಂಡರು ನೀಡಿರುವ ಆಧಾರರಹಿತ ದೂರನ್ನು ಸರ್ಕಾರ ತಕ್ಷಣ ವಜಾಗೊಳಿಸಬೇಕು. ಸಾಮಾಜಿಕ ಜಾಲತಾಣಗಳಲ್ಲಿ ಅವರ ತೇಜೋವಧೆ ಮಾಡಿದ 18 ಮಂದಿಯ ವಿರುದ್ಧ ಪ್ರಕರಣ ದಾಖಲಿಸದಿದ್ದರೆ ಬಿಜೆಪಿ ಹೋರಾಟದ ಹಾದಿ ಹಿಡಿಯಲಿದೆ. ಆಳಂದ ಪ್ರಕರಣವನ್ನು ಸರ್ಕಾರವೇ ದಾಖಲಿಸಿ ನಂತರ ವಾಪಸ್ ಪಡೆದಿರುವುದು ಆಶ್ಚರ್ಯಕರ ಬೆಳವಣಿಗೆ. ರೇವೂರ ಅವರೊಂದಿಗೆ ಪಕ್ಷ ಸಂಪೂರ್ಣವಾಗಿ ನಿಂತಿದೆ'' ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್ ರೇವೂರ, ಜಿಲ್ಲೆಯಲ್ಲಿ ಹೆಚ್ಚುತ್ತಿರುವ ಗೂಂಡಾಗಿರಿ ಮತ್ತು ಅರಾಜಕತೆಯ ವಿರುದ್ಧ ಜನರು ಸಂಘಟಿತರಾಗಿ ಹೋರಾಡಲು ಕಲಬುರಗಿ ಜನ ಸಿದ್ಧರಾಗಿದ್ದಾರೆ ಎಂದು ಹೇಳಿದರು.

ಈ ವೇಳೆ ಮಾಜಿ ಶಾಸಕರಾದ ಅಮರನಾಥ ಪಾಟೀಲ್, ಸುಭಾಷ್ ಗುತ್ತೇದಾರ್, ಬಿಜೆಪಿ ಜಿಲ್ಲಾ ಮಾಜಿ ಅಧ್ಯಕ್ಷ ಶಿವರಾಜ್ ಪಾಟೀಲ್ ರದ್ದೇವಾಡಗಿ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ನಿತಿನ್ ಗುತ್ತೇದಾರ್, ಶರಣಪ್ಪ ತಳವಾರ, ಅವ್ವಣ್ಣ ಮ್ಯಾಕೇರಿ, ರಾಜು ವಾಡೇಕರ ಮಹಾದೇವ್ ಬೆಳಮಗಿ, ಲಿಂಗರಾಜ ಬಿರಾದಾರ, ವಿಶಾಲ ದರ್ಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ನಿರ್ಮಾಣ ಹಂತದ ಕಟ್ಟಡದಿಂದ ಬಿದ್ದು ಕಾರ್ಮಿಕನಿಗೆ ಗಂಭೀರ ಗಾಯ: 25 ಲಕ್ಷ ರೂ. ಪರಿಹಾರ ನೀಡುವಂತೆ ಆಗ್ರಹ



ಕಲಬುರಗಿ,ಜೂ.09-

ನಿರ್ಮಾಣ ಹಂತದ ಕಟ್ಟಡದಲ್ಲಿ ಕೆಲಸ ಮಾಡುವ ವೇಳೆ ಗಂಭೀರವಾಗಿ ಗಾಯಗೊಂಡ ದಲಿತ ಭೋವಿ ವಡ್ಡರ ಸಮಾಜದ ಕಾರ್ಮಿಕ ಸೂರ್ಯಕಾಂತ ರಾಮ ಮಂಜಳಕರ್ ಅವರಿಗೆ ನ್ಯಾಯ ಒದಗಿಸಬೇಕು, ತಪ್ಪಿತಸ್ಥ ಗುತ್ತಿಗೆದಾರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಅವರ ಕುಟುಂಬಕ್ಕೆ ಸಮರ್ಪಕ ಪರಿಹಾರ ನೀಡಬೇಕು ಎಂದು ಆಗ್ರಹಿಸಿ ಕಲಬುರಗಿ ಜಿಲ್ಲಾ ಭೋವಿ ವಡ್ಡರ ಸಮಾಜದ ನೇತೃತ್ವದಲ್ಲಿ ಸೋಮವಾರ ಬೃಹತ್ ಪ್ರತಿಭಟನೆ ನಡೆಯಿತು.

ತಿಮ್ಮಾಪುರ ಚೌಕದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದ ಸಮಾಜದ ಮುಖಂಡರು ಹಾಗೂ ಸದಸ್ಯರು, ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಬ್ರಹ್ಮಪುರ ಬಡಾವಣೆಯ ನಿವಾಸಿಯಾಗಿ ರುವ ಕೂಲಿ ಕಾರ್ಮಿಕ ಸೂರ್ಯಕಾಂತ ರಾಮ ಮಂಜಳಕರ್ ಅವರು ಎಪ್ರಿಲ್ 21ರಂದು ಗಾಜಿಪುರ ಬಡಾವಣೆಯ ನಿರ್ಮಾಣ ಹಂತದ ಕಟ್ಟಡದ ಎರಡನೇ ಮಹಡಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ವೇಳೆ ಕೆಳಗೆ ಬಿದ್ದು ಗಂಭೀರವಾಗಿ ಗಾಯಗೊಂಡಿದ್ದರು. ಕೆಲಸದ ಸ್ಥಳದಲ್ಲಿ ಅಗತ್ಯ ಸುರಕ್ಷತಾ ಕ್ರಮಗಳನ್ನು ಅನುಸರಿಸದಿರುವುದು ಈ ದುರ್ಘಟನೆಗೆ ಕಾರಣವಾಗಿದೆ ಎಂದು ಆರೋಪಿಸಲಾಗಿದೆ.

ಘಟನೆಯಲ್ಲಿ ಸೂರ್ಯಕಾಂತ ಅವರ ಎರಡೂ ಕಾಲುಗಳಿಗೆ ತೀವ್ರ ಗಾಯಗಳಾಗಿದ್ದು, ಮೊಣಕಾಲಿನ ಚಿಪ್ಪು ಮುರಿದು ಶಾಶ್ವತ ಅಂಗವೈಕಲ್ಯದ ಸ್ಥಿತಿ ಎದುರಾಗಿದೆ. ಹಲವು ಶಸ್ತ್ರಚಿಕಿತ್ಸೆ ಗಳ ಬಳಿಕವೂ ಅವರು ನಡೆಯಲು ಸಾಧ್ಯವಾಗದ ಪರಿಸ್ಥಿತಿಯಲ್ಲಿದ್ದು, ಕುಟುಂಬದ ಜೀವನೋಪಾಯವೇ ಸಂಕಷ್ಟಕ್ಕೆ ಸಿಲುಕಿದೆ ಎಂದು ಪ್ರತಿಭಟನಾಕಾರರು ತಿಳಿಸಿದ್ದಾರೆ.

ಘಟನೆಯ ನಂತರ ಗುತ್ತಿಗೆದಾರ ಅಣ್ಣಯ್ಯ ಅವರು ಪೊಲೀಸರ ಸಮ್ಮುಖದಲ್ಲಿ 7 ಲಕ್ಷ ಪರಿಹಾರ ನೀಡುವುದಾಗಿ ಲಿಖಿತ ಭರವಸೆ ನೀಡಿದ್ದರೂ, ಇದುವರೆಗೆ ಹಣ ಪಾವತಿಸದೆ ಕುಟುಂಬವನ್ನು ಸತಾಯಿಸುತ್ತಿದ್ದು, ಜೀವ ಬೆದರಿಕೆ ಹಾಕುತ್ತಿರುವುದಾಗಿ ಆರೋಪಿಸಲಾಗಿದೆ.

ಸೂರ್ಯಕಾಂತ ಅವರ ಕುಟುಂಬದಲ್ಲಿ ಪತ್ನಿ ಹಾಗೂ ಮೂವರು ಅಪ್ರಾಪ್ತ ಹೆಣ್ಣುಮಕ್ಕಳಿದ್ದು, ಕುಟುಂಬದ ಏಕೈಕ ಆಧಾರಸ್ತಂಭವಾಗಿದ್ದ ಅವರು ಈಗ ದುಡಿಯಲು ಅಸಮರ್ಥರಾಗಿದ್ದಾರೆ. ಹೀಗಾಗಿ ರಾಜ್ಯ ಸರ್ಕಾರವು ಕುಟುಂಬಕ್ಕೆ 75 ಲಕ್ಷ ಪರಿಹಾರ ನೀಡಬೇಕು, ಮೂವರು ಹೆಣ್ಣುಮಕ್ಕಳ ಸಂಪೂರ್ಣ ಶಿಕ್ಷಣ ವೆಚ್ಚವನ್ನು ಭರಿಸಬೇಕು ಹಾಗೂ ನಿರ್ಲಕ್ಷ್ಯ ತೋರಿದ ಗುತ್ತಿಗೆದಾರ ಮತ್ತು ಸಂಬಂಧಿತ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ವಕೀಲ ಹಾಗೂ ಶ್ರೀ ಸಿದ್ಧರಾಮೇಶ್ವರ ಭೋವಿ ವಡ್ಡರ ಸಂಘದ ಸಂಸ್ಥಾಪಕ ಅಧ್ಯಕ್ಷ ರವಿಚಂದ್ರ ಗುತ್ತೇದಾರ, ''ಬಡ ಕಾರ್ಮಿಕನಿಗೆ ನ್ಯಾಯ ಸಿಗುವವರೆಗೆ ನಮ್ಮ ಹೋರಾಟ ನಿಲ್ಲುವುದಿಲ್ಲ. ಕಾರ್ಮಿಕರ ಸುರಕ್ಷತೆಯನ್ನು ನಿರ್ಲಕ್ಷಿಸುವವರ ವಿರುದ್ಧ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕು'' ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ವಿಠಲ ನೆಲೋಗಿ, ಹರಿಬಾಬು ದೋತ್ರೆ, ಸುರೇಶ ಸಾಗರ, ತಿಮ್ಮಯ್ಯ ದೇವಕರ, ಲಕ್ಷ್ಮಣ, ಸುರೇಶ, ಹೀರಾ, ಪರಶುರಾಮ, ಸಂಜು, ವೆಂಕಟೇಶ, ಮಂಜುನಾಥ, ಶಾಮರಾವ ಸೇರಿದಂತೆ ಭೋವಿ ವಡ್ಡರ ಸಮಾಜದ ಮುಖಂಡರು, ಮಹಿಳೆಯರು, ಯುವಕರು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಭಾಗವಹಿಸಿದ್ದರು.

ಇಂಗಳಗಿ ರಸ್ತೆ ದುರಸ್ತಿಗೆ ಆಗ್ರಹಿಸಿ ಹೆದ್ದಾರಿ ತಡೆದು ರೈತರಿಂದ ಪ್ರತಿಭಟನೆ



ಅಫಜಲಪುರ,ಜೂ.09-

ತಾಲೂಕಿನ ಮದರಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಇಂಗಳಗಿ (ಬಿ) ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆಯ ದುರಸ್ತಿ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಗ್ರಾಮಸ್ಥರು ಹಾಗೂ ಪ್ರಾಂತ ರೈತ ಸಂಘದ ಪದಾಧಿಕಾರಿಗಳು ಸೋಮವಾರ ರಾಷ್ಟ್ರೀಯ ಹೆದ್ದಾರಿಯಲ್ಲಿ ಎತ್ತಿನಬಂಡಿಗಳ ಮೂಲಕ ಸುಮಾರು ಮೂರು ಗಂಟೆಗಳ ಕಾಲ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ಇಂಗಳಗಿ ಕ್ರಾಸ್‌ನಲ್ಲಿರುವ ಕಲಬುರಗಿ ಸೋಲಾಪುರ 150(ಇ) ರಾಷ್ಟ್ರೀಯ ಹೆದ್ದಾರಿಯಲ್ಲಿ ನಡೆದ ಪ್ರತಿಭಟನೆಯಿಂದ ಹೆದ್ದಾರಿಯ ಎರಡೂ ಬದಿಗಳಲ್ಲಿ ಕಿಲೋಮೀಟರ್‌ಗಟ್ಟಲೆ ವಾಹನಗಳು ಸಾಲುಗಟ್ಟಿ ನಿಂತಿದ್ದು, ಪ್ರಯಾಣಿಕರು ಹಾಗೂ ವಾಹನ ಸವಾರರು ಪರದಾಡುವಂತಾಯಿತು.

ಪ್ರತಿಭಟನೆಯಲ್ಲಿ ಮುಖಂಡ ಶರಣಬಸಪ್ಪ ಮಮಶೆಟ್ಟಿ ಮಾತನಾಡಿ ''ಇಂಗಳಗಿ (ಬಿ) ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಗ್ರಾಮಸ್ಥರ ಜೀವನಾಡಿಯಾಗಿದೆ. ಪ್ರತಿದಿನ ನೂರಾರು ಜನರು ಇದೇ ರಸ್ತೆಯ ಮೂಲಕ ಸಂಚರಿಸುತ್ತಾರೆ. ಆದರೆ ರಸ್ತೆಯುದ್ದಕ್ಕೂ ದೊಡ್ಡ ದೊಡ್ಡ ಗುಂಡಿಗಳು ಬಿದ್ದಿದ್ದು, ಮೇಲ್ಮೈ ಸಂಪೂರ್ಣವಾಗಿ ಹದಗೆಟ್ಟಿದೆ. ಇದರಿಂದ ರೈತರು, ವಿದ್ಯಾರ್ಥಿಗಳು, ವಾಹನ ಸವಾರರು ಹಾಗೂ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಹೇಳಿದರು.

ರೈತರ ಜಮೀನುಗಳಲ್ಲಿ ವಿದ್ಯುತ್ ಪರಿವರ್ತಕಗಳು (ಟಿಸಿ) ಸುಟ್ಟ ಸಂದರ್ಭದಲ್ಲಿ ತಕ್ಷಣ ದುರಸ್ತಿ ಅಥವಾ ಬದಲಿ ವ್ಯವಸ್ಥೆ ಕಲ್ಪಿಸಬೇಕು. ಟಿಸಿ ದುರಸ್ತಿಗೆ ಜೆಸ್ಕಾಂ ಸಿಬ್ಬಂದಿ ಹಣ ಕೇಳುತ್ತಿರುವ ಕುರಿತು ದೂರುಗಳು ಕೇಳಿಬರುತ್ತಿದ್ದು, ಜೆಸ್ಕಾಂನ ಹಿರಿಯ ಅಧಿಕಾರಿಗಳು ತನಿಖೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆ ಬಳಿಕ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ವಿವಿಧ ಬೇಡಿಕೆಗಳ ಮನವಿ ಪತ್ರ ಸಲ್ಲಿಸಲಾಯಿತು.

ಪ್ರತಿಭಟನೆಯಲ್ಲಿ ಬಸವರಾಜ ಚಾಂದಕವಟೆ, ಶರಣಬಸಪ್ಪ ಮಮಶೆಟ್ಟಿ, ಸಂತೋಷ ಮಲಗೊಂಡ, ಅಶೋಕ ಹೂಗಾರ, ಸಿದ್ದು ದಣ್ಣೂರ, ಹಣಮಂತ ಗೌರ, ಭಾಗಣ್ಣ ಘತ್ತರಗಿ, ಅಣ್ಣಾರಾವ ಪಾಟೀಲ, ಸಚಿನ್ ನಡಗೇರಿ, ಬೀರಪ್ಪ ಮೊನಟಗಿ ಹಾಗೂ ಭೀಮಶ್ಯಾ ಬಡದಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಝಮೀರ್ ಅಹಮ್ಮದ್ ಅವರಿಗೆ ಸಚಿವ ಸ್ಥಾನ ನೀಡುವಂತೆ ಆಗ್ರಹಿಸಿ ರೈತರಿಂದ ಪ್ರತಿಭಟನೆ



ಹೊಸಪೇಟೆ,ಜೂ.09-

ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಮಾಜಿ ಸಚಿವ ಝಮೀರ್ ಅಹಮ್ಮದ್ ಖಾನ್ ಅವರಿಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿ ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ರೈತರು ಬೃಹತ್ ಪ್ರತಿಭಟನೆ ನಡೆಸಿದರು.

ನಗರದ ಡಾ.ಪುನೀತ್ ರಾಜ್‌ಕುಮಾರ್ ವೃತ್ತದಲ್ಲಿ ರಾಜ್ಯ ರೈತ ಸಂಘಟನೆಯ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ನೂರಾರು ರೈತರು ಭಾಗವಹಿಸಿ, ರಸ್ತೆ ಮಧ್ಯೆ ಕುಳಿತು ಸರಕಾರ ಹಾಗೂ ಕಾಂಗ್ರೆಸ್ ಹೈಕಮಾಂಡ್ ವಿರುದ್ಧ ತಮ್ಮ ಅಸಮಾಧಾನ ವ್ಯಕ್ತಪಡಿಸಿದರು. ಝಮೀರ್ ಅಹಮ್ಮದ್ ಖಾನ್ ಅವರಿಗೆ ಸಚಿವ ಸ್ಥಾನ ನೀಡುವುದರ ಜೊತೆಗೆ ವಿಜಯನಗರ ಜಿಲ್ಲಾ ಉಸ್ತುವಾರಿ ಜವಾಬ್ದಾರಿಯನ್ನೂ ನೀಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ರಾಜ್ಯ ರೈತ ಸಂಘಟನೆಯ ಜಿಲ್ಲಾ ಅಧ್ಯಕ್ಷ ಗಾಳೆಪ್ಪ ಮಾತನಾಡಿ, ಝಮೀರ್ ಅಹಮ್ಮದ್ ಖಾನ್ ಕೇವಲ ಒಂದು ಸಮುದಾಯಕ್ಕೆ ಸೀಮಿತವಾದ ನಾಯಕರಲ್ಲ. ಅವರು ಎಲ್ಲಾ ವರ್ಗಗಳ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಜನಪರ ನಾಯಕ. ವಿಜಯನಗರ ಜಿಲ್ಲೆಯ ಉಸ್ತುವಾರಿಯಾಗಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ಜಿಲ್ಲೆಯ ಅಭಿವೃದ್ಧಿಗೆ ಸಾಕಷ್ಟು ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ಹಾನಿಗೊಳಗಾದ ಸಂದರ್ಭದಲ್ಲಿ ಝಮೀರ್ ಅಹಮ್ಮದ್ ಖಾನ್ ತಕ್ಷಣ ಸ್ಪಂದಿಸಿ ರೈತರ ನೆರವಿಗೆ ಧಾವಿಸಿದ್ದರು. ಹೊಸ ಗೇಟ್ ನಿರ್ಮಾಣಕ್ಕೆ ಮುಂದಾಳತ್ವ ವಹಿಸಿದ್ದಲ್ಲದೆ,

ರಾಜ್ಯ ಸರಕಾರದ ಅನುದಾನದೊಂದಿಗೆ ಆಂಧ್ರಪ್ರದೇಶ ಹಾಗೂ ತೆಲಂಗಾಣ ಸರಕಾರಗಳೊಂದಿಗೆ ಸಮನ್ವಯ ಸಾಧಿಸಿ ದುರಸ್ತಿ

ಕಾರ್ಯವನ್ನು ವೇಗವಾಗಿ ಪೂರ್ಣಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು ಎಂದು ಗಾಳೆಪ್ಪ ತಿಳಿಸಿದರು.

ಗೇಟ್ ದುರಸ್ತಿ ಕಾರ್ಯ ಪೂರ್ಣಗೊಂಡ ಪರಿಣಾಮ ರೈತರಿಗೆ ಎರಡು ಬೆಳೆಗಳಿಗೆ ಅಗತ್ಯವಿರುವ ನೀರು ಲಭ್ಯವಾಗುತ್ತಿದೆ. ಕೃಷಿ ಚಟುವಟಿಕೆಗಳು ಸುಗಮವಾಗಿ ನಡೆಯಲು ಝಮೀರ್ ಅವರ ಪ್ರಯತ್ನಗಳು ಕಾರಣವಾಗಿವೆ. ಇಂತಹ ಜನಪರ ಹಾಗೂ ಅಭಿವೃದ್ಧಿ ಪರ ನಾಯಕರಿಗೆ ಸಚಿವ ಸ್ಥಾನ ನೀಡುವುದು ನ್ಯಾಯಸಮ್ಮತವಾಗಿದೆ ಎಂದು ರೈತರು ಅಭಿಪ್ರಾಯಪಟ್ಟರು.

ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ರೈತರು ಮತ್ತು ಸಂಘಟನೆಯ ಮುಖಂಡರು ಕಾಂಗ್ರೆಸ್ ಹೈಕಮಾಂಡ್ ಹಾಗೂ ಮುಖ್ಯಮಂತ್ರಿ ಗಮನ ಸೆಳೆಯುವ ಉದ್ದೇಶದಿಂದ ಘೋಷಣೆಗಳನ್ನು ಕೂಗಿ ತಮ್ಮ

ಬೇಡಿಕೆಯನ್ನು ಸರಕಾರದ ಮುಂದೆ ಮಂಡಿಸಿದರು. ಝಮೀರ್ ಅಹಮ್ಮದ್ ಖಾನ್ ಅವರಿಗೆ ಸಚಿವ ಸ್ಥಾನ ನೀಡುವ ಮೂಲಕ ಜಿಲ್ಲೆಯ ಅಭಿವೃದ್ಧಿಗೆ ಮತ್ತಷ್ಟು ವೇಗ ನೀಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯ ಹಿನ್ನೆಲೆಯಲ್ಲಿ ಕೆಲಕಾಲ ಡಾ. ಪುನೀತ್ ರಾಜ್‌ಕುಮಾರ್ ವೃತ್ತದಲ್ಲಿ ವಾಹನ ಸಂಚಾರಕ್ಕೆ ಅಡಚಣೆ ಉಂಟಾದರೂ, ಬಳಿಕ ಪೊಲೀಸರು ಪರಿಸ್ಥಿತಿಯನ್ನು ನಿಯಂತ್ರಿಸಿ ಸಂಚಾರ ವ್ಯವಸ್ಥೆಯನ್ನು ಸುಗಮಗೊಳಿಸಿದರು.

ಝಮೀರ್ ಅಹಮ್ಮದ್ ಖಾನ್ ಅವರು ಕೇವಲ ಒಂದು ಸಮುದಾಯದ ನಾಯಕರಲ್ಲ. ತುಂಗಭದ್ರಾ ಕ್ರಸ್ಟ್ ಗೇಟ್ ಸಮಸ್ಯೆ ಸಂದರ್ಭದಲ್ಲಿ ರೈತರ ಪರ ನಿಂತು ಪರಿಹಾರ ಕಲ್ಪಿಸಿದವರು. ಅಂತಹ ಅಭಿವೃದ್ಧಿ ಪರ ನಾಯಕನಿಗೆ ಸಚಿವ ಸ್ಥಾನ ನೀಡುವುದರ ಜೊತೆಗೆ ವಿಜಯನಗರ ಜಿಲ್ಲಾ ಉಸ್ತುವಾರಿ ಜವಾಬ್ದಾರಿಯನ್ನೂ ನೀಡಬೇಕು ಎಂದು ರಾಜ್ಯ ರೈತ ಸಂಘಟನೆಯ ಜಿಲ್ಲಾಧ್ಯಕ್ಷ ಗಾಳೆಪ್ಪ ಹೇಳಿದರು.

ಒಂದನೇಯ ಪುಟದಿಂದ

ಇಂಧನ, ಸಿಲಿಂಡರ್ ಬೆಲೆ ಏರಿಕೆ ಖಂಡಿಸಿ ಕಾಂಗ್ರೆಸ್ ಪ್ರತಿಭಟನೆ

ಮಾಡುತ್ತಿದೆ ಎಂದು ಕಿಡಿಕಾಡಿ ದರು.ಈ ಸಂದರ್ಭದಲ್ಲಿ ಕಾಂಗ್ರೆಸ್ ಜಿಲ್ಲಾ ಸಮಿತಿ ಅಧ್ಯಕ್ಷ ಬಸವರಾಜ ಪಾಟೀಲ್ ಇಟಗಿ, ಜಿಲ್ಲಾ ಮಾಧ್ಯ ಮ ವಕ್ತಾರ ರಜಾಕ್ ಉಸ್ತಾದ್, ಕೆ. ಶಾಂತಪ್ಪ, ಶ್ರೀ ಜಯಂತರಾವ್ ಪತಂಗ್, ಮುರಳಿ ಯಾದವ, ತಲೆಕಾಯಿ ಮಾರೇಪ್ಪ, ಚೇತನ್ ಕಡಗೋಲ್, ಅಯ್ಯಪ್ಪ ಸ್ವಾಮಿ, ಮೊಹಮ್ಮದ್ ಸಲಾಂ, ಶ್ರೀದೇವಿ ನಾಯಕ, ಪ್ರತಿಭಾ ರೆಡ್ಡಿ, ಸುರೇಖಾ, ರುದ್ರಪ್ಪ ಅಂಗಡಿ, ಅಸ್ಲಾಂ ಪಾಷಾ ಸೇರಿದಂತೆ ಹಲವಾರು ಮುಖಂಡರು ಹಾಗೂ ಕಾರ್ಯಕರ್ತರು ಸೇರಿದಂತೆ ಉಪಸ್ಥಿತರಿದ್ದರು.

ನಗರ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ ಗುಣಮಟ್ಟದೊಂದಿಗೆ ಪೂರ್ಣಗೊಳಿಸಲು ಜಿಲ್ಲಾಧಿಕಾರಿ ಸೂಚನೆ

ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿ ದರು.

ಪರಿಶೀಲನೆ ವೇಳೆ ಕಾಮಗಾರಿ ಗಳ ಪ್ರಗತಿ, ನಿರ್ವಹಣಾ ವ್ಯವಸ್ಥೆ, ಕಾರ್ಯನಿರ್ವಹಣೆಯ ಗುಣಮಟ್ಟ ಹಾಗೂ ಸಾರ್ವಜನಿಕರಿಗೆ ಆಗುವ ಪ್ರಯೋಜನಗಳ ಕುರಿತು ಅಧಿಕಾರಿ ಗಳಿಂದ ಮಾಹಿತಿ ಪಡೆದುಕೊಂಡರು.

ಕುಡಿಯುವ ನೀರು ಪೂರೈಕೆ, ಒಳಚರಂಡಿ ನಿರ್ವಹಣೆ, ತ್ಯಾಜ್ಯ ಸಂಸ್ಕರಣೆ, ಪರಿಸರ ಸಂರಕ್ಷಣೆ ಹಾಗೂ ಜಲಮೂಲಗಳ ಅಭಿವೃದ್ಧಿಗೆ ಸಂಬಂಧಿಸಿದ ಎಲ್ಲಾ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಗುಣಮಟ್ಟದೊಂದಿಗೆ ಪೂರ್ಣಗೊಳಿಸುವಂತೆ ಸಂಬಂಧಿತ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ಸೂಚನೆ ನೀಡಿದರು. ನಗರದ ಸುಸ್ಥಿರ ಅಭಿವೃದ್ಧಿ ಹಾಗೂ ಸಾರ್ವಜನಿಕ ಸೇವೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಜಿಲ್ಲಾಡಳಿತ ಬದ್ಧವಾಗಿದ್ದು, ನಾಗರಿಕರಿಗೆ ಗುಣಮಟ್ಟದ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ನಿರಂತರ ಮೇಲ್ವಿಚಾರಣೆ ಕೈಗೊಳ್ಳಲಾಗುತ್ತಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಆಯುಕ್ತರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ದಿ.11: ಉಮಾಪತಿ ಚುಕ್ಕಿ 50ನೇ ಪುಣ್ಯಸ್ಮರಣೆ ನಿಮಿತ್ಯ ಬಸವತತ್ವ ಚಿಂತನೆಗೋಷ್ಠಿ

ವಹಿಸಲಿದ್ದಾರೆ ಎಂದರು. ಮಾಜಿ ಸಚಿವ ಎನ್ ಎಸ್ ಬೋಸರಾಜು ಅವರು ಕಾರ್ಯಕ್ರಮ ಉದ್ಘಾಟಿಸುವವರು,ಕಾರ್ಯಕ್ರಮದ ಅಧ್ಯಕ್ಷತೆ ಆಳಂದ ಅನುಭವ ಮಂಟಪದ ಶ್ರೀ ವಿಶ್ವನಾಥ ಕೋರಣೇಶ್ವರ ಮಹಾಸ್ವಾಮಿಗಳು ವಹಿಸಲಿದ್ದಾರೆ ಎಂದರು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಶಾಸಕರು ಹಂಪಣ್ಣ ನಾಯಕ, ಸಂಸದ ಜಿ. ಕುಮಾರ ನಾಯಕ, ಬಸವರಾಜ ಧನ್ನೂರು ಬೀದರ್ ಸೇರಿದಂತೆ ಅನೇಕ ಗಣ್ಯರು ಆಗಮಿಸಲಿದ್ದಾರೆ.ಸಂಜೆ 6 ಗಂಟೆಗೆ ಸಮಾರೋಪ ಸಮಾರಂಭ ಕಾರ್ಯಕ್ರಮದ ದಿವ್ಯಾ ಸಾನಿಧ್ಯ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರು ವಹಿಸಲಿದ್ದಾರೆ ಎಂದರು.ಚುಕ್ಕಿ ಪ್ರತಿಷ್ಠಾನ ಅಧ್ಯಕ್ಷರಾದ ಚುಕ್ಕಿ ಸೂಗಪ್ಪ ಸಾಹುಕಾರ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಶರಣ ಚಿಂತಕರು ಬಸವಾಂಬಿಕಾ ಬಸವರಾಜಪ್ಪ ಭದ್ರಾವತಿ ಆಗಮಿಸಲಿದ್ದು, ಜಿಲ್ಲಾ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷರಾದ ಚಂದ್ರಶೇಖರ ಪಾಟೀಲ್ ಮಿರ್ಜಾಪೂರು, ಹೆಚ್. ಎಂ ರೇಣುಕಾಪ್ರಸನ್ನ, ಡಾ.ಬಸವಪ್ರಭು ಪಾಟೀಲ್ ಬೆಟ್ಟದೂರು, ಎನ್. ಗಿರಿಜಾ ಶಂಕರ, ಮಹಾಂತೇಶ ಪಾಟೀಲ್ ಅತ್ತನೂರು ಹಾಗೂ ಶರಣಗೌಡ, ಪರಮೇಶ್ವರ ಶಾಲಿಮಠ ವೇದಿಕೆ ಉಪಸ್ಥಿತಿ ವಹಿಸಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಪರಮೇಶ್ವರ ಶಾಲಿಮಠ, ಶಿವಾನಂದ ಚುಕ್ಕಿ, ಮಲ್ಲಿಕಾರ್ಜುನ ಅಳ್ಳುರು ಸೇರಿದಂತೆ ಉಪಸ್ಥಿತರಿದ್ದರು.

ಪ್ರವಾಸೋದ್ಯಮ ವೃದ್ಧಿಗೆ ಮೂಲ ಸೌಕರ್ಯ ಅಭಿವೃದ್ಧಿಗೆ ಪೂವಿತಾ ಸೂಚನೆ

ಜಿಲ್ಲಾಧಿಕಾರಿಗಳು, ನಾರದಗಡ್ಡೆ ಯಲ್ಲಿರುವ ಹಳೆಯ ಕಟ್ಟಡವನ್ನು ತೆರವುಗೊಳಿಸಿ ಹೊಸ ಕಟ್ಟಡ ನಿರ್ಮಾಣಕ್ಕೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಆದೇಶಿಸಿದರು. ಜಿಲ್ಲಾಡಳಿತವು ನಾರದಗಡ್ಡೆ ಯನ್ನು ಇನ್ನಷ್ಟು ಆಕರ್ಷಕ ಹಾಗೂ ಪ್ರವಾಸಿಗ ಸ್ನೇಹಿ ತಾಣವನ್ನಾಗಿ ರೂಪಿಸುವ ನಿಟ್ಟಿನಲ್ಲಿ ಬದ್ಧವಾಗಿದ್ದು, ಪ್ರವಾಸೋದ್ಯಮ ಅಭಿವೃದ್ಧಿಗೆ ಅಗತ್ಯ ಸೌಲಭ್ಯಗಳನ್ನು ಹಂತ ಹಂತವಾಗಿ ಒದಗಿಸಲಾ ಗುವುದು ಎಂದು ಡಿಸಿ ಪೂವಿತಾ ಎಸ್. ಹೇಳಿದರು.

ಸಿಂಧನೂರಿನ :ಅಭಿವೃದ್ಧಿಗೆ ಶಾಸಕರಿಂದ ಮತ್ತೊಂದು ಮಹತ್ವದ ಹೆಜ್ಜೆ

ಛತ್ರಪ್ಪ ಕುರಕುಂದಿ. ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ. ಖಾಜಿ ಮಲಿಕ್ ವಕೀಲ. ನಗರ ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ. ಮತ್ತು ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕ ಅಧ್ಯಕ್ಷರು. ವೈ ಅನಿಲ್ ಕುಮಾರ್. ಹಾಗೂ ಇನ್ನಿತರರು ಸೇರಿದಂತೆ ಹಲವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಟಿ.ಎ. ನಾರಾಯಣಗೌಡರ 60ನೇ ಜನ್ಮದಿನಾಚರಣೆ

ಬೆಳಿಗ್ಗೆ 10:15 ಗಂಟೆ ನಡೆಯಲಿದೆ ಎಂದು ಶ್ರೀ ಎಂ. ವಿನೋದ್ ರೆಡ್ಡಿ ಜಿಲ್ಲಾಧ್ಯಕ್ಷರು ಕರ್ನಾಟಕ ರಕ್ಷಣಾ ವೇದಿಕೆ, ರಾಯಚೂರು ಅವರು ತಿಳಿಸಿದ್ದಾರೆ.



ಇಂದು ಬೆಂಗಳೂರಿನಲ್ಲಿ ಐ ಟಿ ಬಿ ಟಿ ಗೃಹ ಸಚಿವರಾಗಿ ನೇಮಕಗೊಂಡ ಶ್ರೀ ಮಾನ್ಯ ಪ್ರಿಯಾಂಕ ಖರ್ಗೆ ಅವರನ್ನು ಕೋಲಿ ಕಬ್ಬಲಿಗ ಎಸ್ ಟಿ ಹೋರಾಟ ಸಮಿತಿ ಮತ್ತು ಕಾಂಗ್ರೆಸ್ ಮುಖಂಡರು ಆದ ಲಚ್ಚಪ್ಪ ಜಮಾದಾರವರು ಗೌತಮ ಬುದ್ಧರ ವಿಗ್ರಹ ನೀಡಿ ಶುಭಾಶಯಗಳು ಕೋರಲಾಯಿತು : ಮಲ್ಲಿಕಾರ್ಜುನ ಗುಡುಬಾ. ಅಂಬರಾಯ ಜವಳಗಾ. ಸಿದ್ದಪ್ಪ ಸಿನೂರ. ರಾಮಲಿಂಗ ನಾಟಿಕಾರ. ಮರೆಪ್ಪ ಹಳ್ಳಿ. ನಾಗೇಂದ್ರಪ್ಪ ಲಿಂಗಪ್ಪಲ್ಲಿ. ಸಾಬಣ್ಣ ತೋಟನಳ್ಳಿ ಇನ್ನಿತರರು ಉಪಸ್ಥಿತರಿದ್ದರು

ಸಿಂಧನೂರು: ಉಜ್ವಲಾ ಯೋಜನೆ ಸಿಲಿಂಡರ್ ಗ್ಯಾಸ್ 9ರಿಂದ 4ಕ್ಕೆ ಇಳಿಕೆ: ಸಿಪಿಐ(ಎಂಎಲ್) ಲಿಬರೇಶನ್ ಖಂಡನೆ :ನಾಗರಾಜ ಪೂಜಾರ

ಸಿಂಧನೂರು,ಜೂ.09-

ಪ್ರಧಾನ ಮಂತ್ರಿ ಉಜ್ವಲಾ ಯೋಜನೆಯ (ಪಿಎಂ ಯುವೈ) ಫಲಾನುಭವಿಗಳಿಗೆ ಪ್ರತಿವರ್ಷ ನೀಡುತ್ತಿದ್ದ ಸಬ್ಸಿಡಿ ಸಹಿತ ಎಲ್‌ಪಿಜಿ ಸಿಲಿಂಡರ್ ಸಂಖ್ಯೆಯನ್ನು ಕೇಂದ್ರದ ಬಿಜೆಪಿ ನೇತೃತ್ವದ ಸರ್ಕಾರ ನಾಲ್ಕಕ್ಕೆ ಇಳಿಕೆ ಮಾಡಿದ್ದಲ್ಲದೇ ರೂ.29 ಬೆಲೆ ಏರಿಕೆ ಮಾಡಿರುವುದನ್ನು ಸಿಪಿಐ(ಎಂಎಲ್) ಲಿಬರೇಶನ್

ಜಿಲ್ಲಾ ಕಾರ್ಯದರ್ಶಿ ನಾಗರಾಜ ಪೂಜಾರ್ ಖಂಡಿಸಿದ್ದಾರೆ.

ಈ ಕುರಿತು ಮಂಗಳವಾರ ಪತ್ರಿಕಾ ಪ್ರಕಟಣೆ ಬಿಡುಗಡೆ ಮಾಡಿರುವ ಅವರು, ''ಹೊಗೆಮುಕ್ತ ಮನೆ ಮಾಡುವುದಾಗಿ ಹೇಳಿ, ಉಜ್ವಲಾ ಯೋಜನೆಯಡಿ ಆರಂಭದಲ್ಲಿ ವರ್ಷಕ್ಕೆ 14.2 ಕೆ.ಜಿ ತೂಕದ 12 ಅಡುಗೆ ಅನಿಲ ಗ್ಯಾಸ್‌ಗಳನ್ನು ನಿಗದಿಪಡಿಸಲಾಗಿತ್ತು. ಆದರೆ ಕಳೆದ ವರ್ಷ 9 ಸಿಲಿಂಡರ್‌ಗೆ ಇಳಿಸಲಾಯಿತು. ಆದರೆ ಈಗ ಕೇಂದ್ರ ಸರ್ಕಾರ ದಿಢೀರ್ ಎಂದು 5 ಸಿಲಿಂಡರ್ ಗ್ಯಾಸ್ ಕಡಿತ ಮಾಡಿ ಕೇವಲ 4 ಗ್ಯಾಸ್‌ಗಳನ್ನು ಫಲಾನುಭವಿಗಳಿಗೆ ನೀಡುವುದಾಗಿ ಹೇಳುತ್ತಿರುವುದು ನಾಚಿಕೆಗೇಡಿತನದ ಸಂಗತಿಯಾಗಿದೆ. ಪರೋಕ್ಷವಾಗಿ ಕೇಂದ್ರ ಸರ್ಕಾರ ಜನರ ಊಟದ ತಟ್ಟೆಗೆ ಕೈಹಾಕಿದ್ದು, ಉಪವಾಸ ಮಾಡಿ ಎಂದ ಹೇಳುತ್ತಿದೆ'' ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

''ಕೂಲಿ ಜಾಸ್ತಿ ಯಾಕೆ ಮಾಡಿಲ್ಲ ?''

ಕೇಂದ್ರ ಸರ್ಕಾರ 4 ಕಾರ್ಮಿಕ ಸಂಹಿತೆಗಳನ್ನು ಜಾರಿ ಮಾಡುವ ಮೂಲಕ ದೇಶದ ಎಲ್ಲ ದುಡಿಯುವ ಜನರ ಹೊಟ್ಟೆಯ ಮೇಲೆ ಬರೆ ಎಳೆದಿದೆ. ಹಣದುಬ್ಬರ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದ್ದು, ಅಗತ್ಯ ವಸ್ತುಗಳು ಗಗನಮುಖಿಯಾಗಿವೆ. ಇಂತಹ ಸಂದರ್ಭದಲ್ಲಿ ಪೆಟ್ರೋಲ್, ಡೀಸೆಲ್ ಹಾಗೂ ಅಡುಗೆ ಅನಿಲ ಬೆಲೆಯನ್ನು ಏರಿಸುವ ಮೂಲಕ ಕೇಂದ್ರ ಸರ್ಕಾರ ಜನಸಾಮಾನ್ಯರನ್ನು ಬೀದಿಗೆ ತಳ್ಳಿದೆ. ಮಧ್ಯಪ್ರಾಚ್ಯದ ಬಿಕ್ಕಟ್ಟಿನ ನೆಪವೊಡ್ಡಿ ಬೆಲೆ ಏರಿಕೆಯನ್ನು ಸಮರ್ಥನೆ ಮಾಡಿಕೊಳ್ಳುವ ಕೇಂದ್ರ ಸರ್ಕಾರ, ಕೂಲಿಯನ್ನು ಯಾಕೆ ಜಾಸ್ತಿ ಮಾಡಿಲ್ಲ'' ಎಂದು ಕೇಂದ್ರ ಸರ್ಕಾರದ ವಿರುದ್ಧ ನಾಗರಾಜ ಪೂಜಾರ ಅವರು ವಾಗ್ದಾಳಿ ನಡೆಸಿ ಪ್ರಶ್ನಿಸಿದ್ದಾರೆ.

ಜಿಲ್ಲೆಯಲ್ಲಿ ನಿರಂತರ ಮಳೆ: ನೀರು ನಿಲ್ಲದಂತೆ ಮುನ್ನೆಚ್ಚರಿಕೆ ವಹಿಸಲು ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು ಸೂಚನೆ

ಬಳ್ಳಾರಿ,ಜೂ.09-


ಜಿಲ್ಲೆಯಲ್ಲಿ ನಿರಂತರವಾಗಿ ಸುರಿಯುತ್ತಿರುವ ಭಾರಿ ಮಳೆಯ ಹಿನ್ನೆಲೆಯಲ್ಲಿ ಸಾರ್ವಜನಿಕ ಆರೋಗ್ಯ ರಕ್ಷಣೆಗಾಗಿ ಮಳೆ ನೀರು ನಿಲ್ಲದಂತೆ ತಡೆಯಲು ಸೂಕ್ತ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಸೂಚಿಸಿದ್ದಾರೆ.

ಬಳ್ಳಾರಿ ನಗರದ ಹಲವು ವಾರ್ಡ್ ಹಾಗೂ ಪ್ರದೇಶಗಳಲ್ಲಿ ವಿವಿಧ ಕಾರಣಗಳಿಂದ ಮಳೆ ನೀರು ಸಂಗ್ರಹಣೆಯಾಗಿದ್ದು, ಇದು ಸಾರ್ವಜನಿಕ ಆರೋಗ್ಯಕ್ಕೆ ದೊಡ್ಡ ಆಪತ್ತನ್ನು ತಂದೊಡ್ಡಬಹುದು. ಭಾರಿ ಮಳೆಯು ಕುಡಿಯುವ ನೀರಿನ ಸರಬರಾಜನ್ನು ಕಲುಷಿತಗೊಳಿಸುವುದಲ್ಲದೆ, ಮೂಲಸೌಕರ್ಯಗಳಿಗೆ ಹಾನಿ ಉಂಟುಮಾಡುತ್ತದೆ. ಅಲ್ಲದೆ, ನಿಂತ ನೀರು ರೋಗಾಣುಗಳ ಸಂತಾನೋತ್ಪತ್ತಿ ಕೇಂದ್ರವಾಗುವ ಸಾಧ್ಯತೆ ಇರುವುದರಿಂದ ಆರೋಗ್ಯ ಇಲಾಖೆಯು ತಕ್ಷಣವೇ ರೋಗ ನಿಯಂತ್ರಣ ಕ್ರಮಗಳನ್ನು ಜಾರಿಗೆ ತರಲಿದೆ ಎಂದು ಅವರು ತಿಳಿಸಿದ್ದಾರೆ.

★ರೋಗವಾಹಕಗಳಿಂದ ಹರಡುವ ರೋಗಗಳು:★ ಟೈರ್‌ಗಳು, ಕೂಲರ್‌ಗಳು ಮತ್ತು ರಸ್ತೆ ಗುಂಡಿಗಳಲ್ಲಿ ನಿಲ್ಲುವ ಮಳೆನೀರು ಡೆಂಗ್ಯೂ, ಮಲೇರಿಯಾ ಮತ್ತು ಚಿಕೂನ್‌ಗುನ್ಯಾ ಹರಡುವ ಸೊಳ್ಳೆಗಳಿಗೆ ಆಶ್ರಯತಾಣವಾಗುತ್ತದೆ.

★ನೀರಿನಿಂದ ಹರಡುವ ರೋಗಗಳು:★ ಪ್ರವಾಹದ ನೀರು ಒಳಚರಂಡಿ ವ್ಯವಸ್ಥೆಯನ್ನು ಸೇರಿ ಕುಡಿಯುವ ನೀರನ್ನು ಕಲುಷಿತಗೊಳಿಸುವುದರಿಂದ ಕಾಲರಾ, ಟೈಫಾಯಿಡ್ ಮತ್ತು ಜಠರದುರಿತದ ಭೀತಿ ಎದುರಾಗುತ್ತದೆ.

★ಸೋಂಕುಗಳು:★ ತೇವಾಂಶ ಮತ್ತು ಪ್ರವಾಹದ ನೀರಿಗೆ ದೀರ್ಘಕಾಲ ಒಡ್ಡಿಕೊಳ್ಳುವುದರಿಂದ ಇನ್ಫ್ಲುಯೆನ್ಸ , ಆಸ್ತಮಾ ಮತ್ತು ಶಿಲೀಂಧ್ರಗಳ ಸೋಂಕು ಹೆಚ್ಚಾಗಬಹುದು. ಹಠಾತ್ ಪ್ರವಾಹ, ಭೂಕುಸಿತ, ಬೆಳೆ ವೈಫಲ್ಯ ಹಾಗೂ ಕಟ್ಟಡಗಳ ಕುಸಿತದಿಂದಾಗಿ ಜನ-ಜಾನುವಾರುಗಳ ಜೀವಕ್ಕೆ ಹಾನಿಯಾಗುವ ಸಾಧ್ಯತೆ ಇರುತ್ತದೆ.



★ಆರೋಗ್ಯ ಇಲಾಖೆಯಿಂದ ಕ್ರಮ:★

★ಸೊಳ್ಳೆ ಮತ್ತು ಲಾರ್ವಾ ನಿಯಂತ್ರಣ:★ ನಿಂತ ನೀರನ್ನು ಖಾಲಿ ಮಾಡಲು ಸಮುದಾಯ ಸ್ವಚ್ಛತಾ ಅಭಿಯಾನ ಹಮ್ಮಿಕೊಳ್ಳಲಾಗುವುದು. ಸೊಳ್ಳೆಗಳ ಜೈವಿಕ ನಿಯಂತ್ರಣಕ್ಕಾಗಿ ಕೊಳಗಳು ಮತ್ತು ನಿರಂತರ ಜಲಮೂಲಗಳಿಗೆ ಲಾರ್ವಾ ಭಕ್ಷಕ ಮೀನುಗಳನ್ನು (ಗ್ಯಾಂಬೂಸಿಯಾ ಅಥವಾ ಗಪ್ಪಿ) ಬಿಡಲಾಗುವುದು. ಹೆಚ್ಚಿನ ಅಪಾಯವಿರುವ ವಲಯಗಳಲ್ಲಿ ಲಾರ್ವಿಸೈಡ್‌ಗಳ ಬಳಕೆ ಮತ್ತು ಫಾಗಿಂಗ್ ಮಾಡಲಾಗುವುದು.

★ಶುದ್ಧ ಕುಡಿಯುವ ನೀರು ಮತ್ತು ನೈರ್ಮಲ್ಯ:★

ಸ್ಥಳೀಯ ನೀರು ಸರಬರಾಜನ್ನು ನಿರಂತರವಾಗಿ ಪರಿಶೀಲಿಸಿ, ಅಗತ್ಯವಿರುವ ಪ್ರದೇಶಗಳಿಗೆ ಕ್ಲೋರಿನೇಷನ್ ಮಾತ್ರೆಗಳನ್ನು ವಿತರಿಸಲಾಗುವುದು. ನೀರು ತುಂಬಿದ ಪ್ರದೇಶಗಳ ತ್ವರಿತ ಒಳಚರಂಡಿ ವ್ಯವಸ್ಥೆ ಮತ್ತು ಸೋರುತ್ತಿರುವ ಪೈಪ್‌ಲೈನ್‌ಗಳ ದುರಸ್ತಿಗೆ ಮುನ್ಸಿ ಪಲ್ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಲಾಗುವುದು.

★ವೈದ್ಯಕೀಯ ಸಿದ್ಧತೆ ಮತ್ತು ಕಣ್ಗಾವಲು:★

ಜಲಾವೃತ ಮತ್ತು ಗ್ರಾಮೀಣ ಪ್ರದೇಶಗಳಿಗೆ ತಕ್ಷಣದ ಚಿಕಿತ್ಸೆ ನೀಡಲು ಸಂಚಾರಿ ಆರೋಗ್ಯ ತಂಡಗಳನ್ನು ನಿಯೋಜಿಸಲಾಗುವುದು. ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಜ್ವರದ ಔಷಧಗಳು, ಪ್ರತಿಜೀವಕಗಳು, ಮಲೇರಿಯಾ ನಿರೋಧಕಗಳು ಮತ್ತು ಒ.ಆರ್.ಎಸ್ ಪಾಕೆಟ್‌ಗಳನ್ನು ಸಾಕಷ್ಟು ಪ್ರಮಾಣದಲ್ಲಿ ಸಂಗ್ರಹಿಸಿಡಲಾಗುವುದು. ಯಾವುದೇ ತುರ್ತು ಪರಿಸ್ಥಿತಿಯನ್ನು ಎದುರಿಸಲು ತ್ವರಿತ ಪ್ರತಿಕ್ರಿಯೆ ತಂಡಗಳನ್ನು ರಚಿಸಲಾಗಿದೆ.

★ಸಾರ್ವಜನಿಕರಿಗೆ ಆರೋಗ್ಯ ಇಲಾಖೆಯ ಪ್ರಮುಖ ಸಲಹೆಗಳು:★

ಸಾರ್ವಜನಿಕರು ಕಡ್ಡಾಯವಾಗಿ ಕುದಿಸಿ ಆರಿಸಿದ ನೀರನ್ನೇ ಕುಡಿಯಬೇಕು. ತರಕಾರಿ ಮತ್ತು ಧಾನ್ಯಗಳನ್ನು ಸ್ವಚ್ಛವಾಗಿ ತೊಳೆದೇ ಬಳಸಬೇಕು. ನಿರಂತರ ಜ್ವರ ಕಾಣಿಸಿಕೊಂಡಲ್ಲಿ ವಿಳಂಬ ಮಾಡದೆ ತಕ್ಷಣವೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಚಿಕಿತ್ಸೆ ಪಡೆಯಬೇಕು. ಮನೆಗಳ ಕಿಟಕಿಗಳಿಗೆ ಸೊಳ್ಳೆ ಪರದೆಗಳನ್ನು ಅಳವಡಿಸುವುದು ಮತ್ತು ರಕ್ಷಣಾತ್ಮಕ ಉಡುಪುಗಳನ್ನು ಧರಿಸುವ ಮೂಲಕ ಸೊಳ್ಳೆ ಕಡಿತದಿಂದ ಸ್ವಯಂ ರಕ್ಷಣೆ ಮಾಡಿಕೊಳ್ಳಬೇಕು.

ಹವಾಮಾನ ವೈಪರೀತ್ಯ ಹಾಗೂ ಮುಂಚಿನ ಎಚ್ಚರಿಕೆ ವ್ಯವಸ್ಥೆಗಳ ಬಗ್ಗೆ ನಿರಂತರ ಮೇಲ್ವಿಚಾರಣೆ ನಡೆಸಲಾಗುತ್ತಿದ್ದು, ಸಾರ್ವಜನಿಕರು ಆತಂಕಪಡದೆ ಆರೋಗ್ಯ ಇಲಾಖೆಯೊಂದಿಗೆ ಸಹಕರಿಸಬೇಕು ಎಂದು ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು ಅವರು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ದಸಂಸದಿಂದ ಬೃಹತ್ ಪ್ರತಿಭಟನೆ



ಕೂಡ್ಲಿಗಿ,ಜೂ.09-

ಹಳ್ಳಿಗಳಲ್ಲಿನ ದಲಿತ ಕೇರಿಗಳಿಗೆ ಮೂಲಸೌಲಭ್ಯ ಕಲ್ಪಿಸುವುದು, ದಲಿತರು ಶತಮಾನಗಳಿಂದ ಸಾಗುವಳಿ ಮಾಡುತ್ತಿರುವ ಸರಕಾರಿ ಭೂಮಿಯನ್ನು ರಕ್ಷಿಸುವುದು ಹಾಗೂ ದಲಿತರ ಮೇಲಿನ ದೌರ್ಜನ್ಯಗಳನ್ನು ತಡೆಯುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿತ) ನೇತೃತ್ವದಲ್ಲಿ ಸೋಮವಾರ ಕೂಡ್ಲಿಗಿಯಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.

ಪಟ್ಟಣದ ಗಾಂಧೀಜಿ ಚಿತಾಭಸ್ಮವಿರುವ ಹುತಾತ್ಮರ ಸ್ಮಾರಕದಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ಮುಖ್ಯರಸ್ತೆ, ಡಾ. ಬಿ.ಆರ್. ಅಂಬೇಡ್ಕರ್ ವೃತ್ತ, ರಾಜವೀರ ಮದಕರಿನಾಯಕ ವೃತ್ತ, ಹಳೆ ಸಂತೆ ಮೈದಾನ ಹಾಗೂ ಕೊತ್ತಲ ಆಂಜನೇಯ ದೇವಸ್ಥಾನ ಮಾರ್ಗವಾಗಿ ತಹಶೀಲ್ದಾರ್ ಕಚೇರಿವರೆಗೆ ಸಾಗಿತು. ಬಳಿಕ ಪ್ರತಿಭಟನಾಕಾರರು ತಹಶೀಲ್ದಾರ್ ಮೂಲಕ ಸರಕಾರಕ್ಕೆ ಮನವಿ ಸಲ್ಲಿಸಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ದಸಂಸ ವಿಜಯನಗರ ಜಿಲ್ಲಾ ಸಂಚಾಲಕ ಎಸ್. ದುರುಗೇಶ್, ತಾಲೂಕಿನಲ್ಲಿ ಪರಿಶಿಷ್ಟ ಜಾತಿಯವರು ಸಾಗುವಳಿ ಮಾಡುತ್ತಿರುವ ಸರಕಾರಿ ಭೂಮಿಗಳನ್ನು ಬೇರೆ ಸಮುದಾಯದವರು ದಬ್ಬಾಳಿಕೆ ಮೂಲಕ ಕಬಳಿಸಲು ಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು. ದಲಿತರಿಗೆ ಸ್ಮಶಾನಗಳ ಕೊರತೆ, ಗಡ್ಡದಬೋರಯ್ಯನಹಟ್ಟಿ ದಲಿತ ಕಾಲೊನಿಯಲ್ಲಿ ಮಳೆನೀರು ನಿಂತು ಉಂಟಾಗಿರುವ ಸಮಸ್ಯೆ ಹಾಗೂ ಪರಿಶಿಷ್ಟ ಜಾತಿಯ ಅಧಿಕಾರಿಗಳ ವಿರುದ್ಧ ನಡೆಯುತ್ತಿರುವ ಕುತಂತ್ರಗಳ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದರು. ಎಸ್ಸಿ -ಎಸ್ಟಿ ಜಮೀನುಗಳನ್ನು ದಲ್ಲಾಳಿಗಳ ಮೂಲಕ ಖಾಸಗಿ ವಿಂಡ್‌ಫ್ಯಾನ್ ಕಂಪೆನಿಗಳಿಗೆ ನೀಡಲಾಗುತ್ತಿದ್ದು, ಅಧಿಕಾರಿಗಳು ಮೌನ ವಹಿಸಿದ್ದಾರೆ ಎಂದು ದೂರಿದರು. ಸಮಸ್ಯೆಗಳಿಗೆ ಶೀಘ್ರ ಪರಿಹಾರ ದೊರೆಯದಿದ್ದರೆ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಸಿದರು.

ದಸಂಸ ತಾಲೂಕು ಸಂಚಾಲಕ ಬಡೇಲಡುಕು ದುರುಗೇಶ್ ಮಾತನಾಡಿ, ದಲಿತ ಕಾಲೊನಿಗಳಲ್ಲಿ ಚರಂಡಿ, ರಸ್ತೆ, ಕುಡಿಯುವ ನೀರು ಹಾಗೂ ವಿದ್ಯುತ್ ಸೇರಿದಂತೆ ಮೂಲಸೌಲಭ್ಯಗಳ ಕೊರತೆ ತೀವ್ರವಾಗಿದೆ ಎಂದರು. ತಾಯಕನಹಳ್ಳಿ ಸೇರಿದಂತೆ ಹಲವು ಗ್ರಾಮಗಳಲ್ಲಿ ದಲಿತರು ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿದ್ದು, ಸಂವಿಧಾನಾತ್ಮಕ ಹಕ್ಕುಗಳನ್ನು ಒದಗಿಸುವಲ್ಲಿ ಸರಕಾರ ಹಾಗೂ ಜನಪ್ರತಿನಿಧಿಗಳು ವಿಫಲರಾಗಿದ್ದಾರೆ ಎಂದು ಆರೋಪಿಸಿದರು.

ಜಿಲ್ಲಾ ಸಂಘಟನಾ ಸಂಚಾಲಕ ಕಂದಗಲ್ಲು ಪರಶುರಾಮ ಮಾತನಾಡಿ, ಮಾದಿಗ ಸಮುದಾಯ ಇನ್ನೂ ಸಾಮಾಜಿಕ ಮತ್ತು ಆರ್ಥಿಕವಾಗಿ ಹಿಂದುಳಿದ ಸ್ಥಿತಿಯಲ್ಲಿದ್ದು, ಅನೇಕ ಕುಟುಂಬಗಳು ಸಣ್ಣ ಮನೆಗಳಲ್ಲಿ ಒಟ್ಟಾಗಿ ಜೀವನ ನಡೆಸುವ ಪರಿಸ್ಥಿತಿ ಎದುರಿಸುತ್ತಿವೆ ಎಂದರು. ದಲಿತರ ಮನೆಗಳ ಮೇಲೆ ಅಪಾಯಕಾರಿಯಾಗಿ ವಿದ್ಯುತ್ ತಂತಿಗಳು ಹಾದುಹೋಗುತ್ತಿದ್ದರೂ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ದೂರಿದರು. ಬೇಡಿಕೆಗಳನ್ನು ಈಡೇರಿಸದಿದ್ದರೆ ತಾಲೂಕು ಕಚೇರಿ ಎದುರು ಅಮರಣಾಂತ ಉಪವಾಸ ಸತ್ಯಾಗ್ರಹ ನಡೆಸುವುದಾಗಿ ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ದಸಂಸ ಮುಖಂಡರು ಹಾಗೂ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಸಾವಿರಕ್ಕೂ ಅಧಿಕ ಜನರು ಭಾಗವಹಿಸಿದ್ದರು.



ಸಂಗನಾಳ ಅನ್ನದಾನೇಶ್ವರ ಸರ್ಕಾರಿ ಪ್ರೌಢಶಾಲೆಯಲ್ಲಿ ವಿಶ್ವ ತಂಬಾಕು ರಹಿತ ದಿನಾಚರಣೆ

ಕೊಪ್ಪಳ,ಜೂ.09-

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾ ಘಟಕ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ಕೊಪ್ಪಳ ಹಾಗೂ ಶ್ರೀ ಅನ್ನದಾನೇಶ್ವರ ಸರ್ಕಾರಿ ಪ್ರೌಢಶಾಲೆ, ಸಂಗನಾಳ ಇವರುಗಳ ಸಂಯುಕ್ತಾಶ್ರಯದಲ್ಲಿ ಇತ್ತೀಚೆಗೆ (ಜೂ. 4ರಂದು) ''ವಿಶ್ವ ತಂಬಾಕು ರಹಿತ ದಿನಾಚರಣೆ'' ಜಾಗೃತಿ ಕಾರ್ಯಕ್ರಮ ನಡೆಯಿತು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶಿವಾನಂದ ವಿ.ಪಿ ಅವರು, ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ಹಾಗೂ ಸಾಂಕ್ರಾಮಿಕ ರೋಗಗಳು ಮತ್ತು ಅಸಾಂಕ್ರಾಮಿಕ ರೋಗಗಳ ಬಗ್ಗೆ ಸಂಪೂರ್ಣವಾಗಿ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರರಾದ ಸಂಗಪ್ಪ ಮಮುಟಗೇರಿ ಅವರು ಕಾರ್ಯಕ್ರಮದ ಕುರಿತು ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಕೂಡ ''ಆಕರ್ಷಣೆಯನ್ನು ಬಹಿರಂಗಪಡಿಸುವುದು-ನಿಕೋಟಿನ್ ಮತ್ತು ತಂಬಾಕು ವ್ಯಸನವನ್ನು ಎದುರಿಸುವುದು'' ಎಂಬ ಘೋಷವಾಕ್ಯದೊಂದಿಗೆ ಮೇ 31 ರಂದು ''ವಿಶ್ವ ತಂಬಾಕು ರಹಿತ ದಿನಾಚರಣೆ'' ಕಾರ್ಯಕ್ರಮ ಆಚರಿಸಲಾಗುತ್ತಿದೆ. ಡಬ್ಲ್ಯೂ.ಹೆಚ್.ಓ ಪ್ರಕಾರ ತಂಬಾಕು ಮತ್ತು ನಿಕೋಟಿನ್ ಉದ್ಯಮವು ಯುವಕರನ್ನು ಗುರಿಯಾಗಿಸಲು ಸುವಾಸನೆ, ವರ್ಣರಂಜಿತ ಪ್ಯಾಕೇಜಿಂಗ್ ಮತ್ತು ಸಾಮಾಜಿಕ ಮಾಧ್ಯಮವನ್ನು ಹೇಗೆ ಬಳಸುತ್ತದೆ ಎಂಬುವದನ್ನು ಬಹಿರಂಗಪಡಿಸುವುದು ಈ ಘೋಷವಾಕ್ಯದ ಉದ್ದೇಶವಾಗಿದೆ. ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡಿದರೆ ಕೊಟ್ಪಾ-2003ರ ಕಾಯ್ದೆಯ ಪ್ರಕಾರ, ದಂಡ ಮತ್ತು ಶಿಕ್ಷೆ ವಿಧಿಸಲಾಗುತ್ತದೆ ಮತ್ತು ಸೆಕ್ಷನ್: 6ಬಿ ಪ್ರಕಾರ ಶೈಕ್ಷಣಿಕ ಸಂಸ್ಥೆಗಳ 100 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವುದು ಶಿಕ್ಷಾರ್ಹ ಅಪರಾಧ ಎಂದು ತಿಳಿದರು.

ದಿಹರೆಯದವರ ಆರೋಗ್ಯ ಸಮಸ್ಯೆಗಳು ಮತ್ತು ಪರಿಹಾರ ಕುರಿತು ತಿಳಿಸಿದರು ಹಾಗೂ ತಂಬಾಕು ಸೇವನೆಯಿಂದ ದೂರವಿದ್ದು ಯುವಕರು ಜಾಗೃತರಾಗಿ ತಮ್ಮ ವಿದ್ಯಾಭ್ಯಾಸ ಮತ್ತು ಉತ್ತಮ ಜೀವನದ ಕಡೆಗೆ ಹೆಚ್ಚು ಗಮನ ಹರಿಸಬೇಕು. ಎಲ್ಲಾ ವಿದ್ಯಾರ್ಥಿಗಳಿಗೆ ತಮ್ಮ ಮನೆ, ಶಾಲಾ, ಕಾಲೇಜುಗಳನ್ನು ತಂಬಾಕು ಮುಕ್ತ ಮಾಡುವುದರಲ್ಲಿ ತಮ್ಮದು ಪ್ರಮುಖ ಪಾತ್ರ ಇರುತ್ತದೆ. ಹಾಗಾಗಿ ನಮ್ಮ ದೇಶವನ್ನು ತಂಬಾಕು ಮುಕ್ತವನ್ನಾಗಿಸಲು ಸಾಧ್ಯ ಹಾಗೂ ವಿದ್ಯಾರ್ಥಿಗಳಿಗೆ ''ಉತ್ತಮ ಜೀವನವನ್ನು ಆಯ್ದುಕೊಳ್ಳಿ ತಂಬಾಕನ್ನಲ್ಲ'' ಎಂದರು.

ಕಾರ್ಯಕ್ರಮದಲ್ಲಿ ಶಾಲೆಯ ಮುಖೋಪಾದ್ಯಯರು ಹಾಗೂ ಎಲ್ಲಾ ಶಾಲೆಯ ಸಿಬ್ಬಂದಿ ವರ್ಗದವರು ಮತ್ತು ಶಾಲೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಬಳ್ಳಾರಿ ಜಿಲ್ಲೆಯಲ್ಲಿ ಬೃಹತ್ ಲೋಕ್ ಅದಾಲತ್‌ಗಳ ಸರಣಿ ಮತ್ತು ಸಮಾಧಾನ ಸಮಾರೋಹ' ಆಂದೋಲನ: ನ್ಯಾ.ಸಿದ್ಧಲಿಂಗ ಪ್ರಭು

ಬಳ್ಳಾರಿ,ಜೂ.09-

ಸಾರ್ವಜನಿಕರಲ್ಲಿ ಕಾನೂನು ಜಾಗೃತಿ ಮೂಡಿಸಲು ಹಾಗೂ ನ್ಯಾಯಾಲಯಗಳಲ್ಲಿ ದೀರ್ಘಕಾಲದಿಂದ ಬಾಕಿ ಉಳಿದಿರುವ ಪ್ರಕರಣಗಳನ್ನು ಉಭಯ ಪಕ್ಷಕಾರರ ಪರಸ್ಪರ ರಾಜಿ ಸಂಧಾನದ ಮೂಲಕ ಸೌಹಾರ್ದಯುತವಾಗಿ ಇತ್ಯರ್ಥಪಡಿಸಲು ಬಳ್ಳಾರಿ ಜಿಲ್ಲೆಯಾದ್ಯಂತ ಬೃಹತ್ ಲೋಕ್ ಅದಾಲತ್‌ಗಳ ಸರಣಿಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಸಿದ್ದಲಿಂಗ ಪ್ರಭು ಅವರು ತಿಳಿಸಿದ್ದಾರೆ.

ಸುಪ್ರೀಂ ಕೋರ್ಟ್, ಹೈಕೋರ್ಟ್ ಹಾಗೂ ರಾಷ್ಟಿಯ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಆದೇಶದನ್ವಯ ರಾಷ್ಟಿಯ ಲೋಕ್-ಅದಾಲತ್, ಚೆಕ್ ಬೌನ್ಸ್ ಪ್ರಕರಣಗಳ ವಿಶೇಷ ಲೋಕ್ ಅದಾಲತ್ ಹಾಗೂ ಸುಪ್ರೀಂ ಕೋರ್ಟ್ನ ನಿರ್ದೇಶನದ ಮೇರೆಗೆ ಸಮಾಧಾನ ಸಮಾರೋಹ' ಆಂದೋಲನಗಳನ್ನು ಆಯೋಜಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಜಿಲ್ಲೆಯಾದ್ಯಂತ ನಡೆಯಲಿರುವ ಅದಾಲತ್‌ಗಳ ಸಂಪೂರ್ಣ ವೇಳಾಪಟ್ಟಿ: ರಾಷ್ಟಿಯ ಲೋಕ ಅದಾಲತ್: ಬರುವ ಜುಲೈ 11 ರಂದು ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ವರ್ಷದ ಎರಡನೇ ರಾಷ್ಟಿಯ ಲೋಕ ಅದಾಲತ್ ಅನ್ನು ಆಯೋಜಿಸಲಾಗಿದೆ. ಇಲ್ಲಿ ಸಿವಿಲ್, ರಾಜಿಯಾಗಬಹುದಾದ ಕ್ರಿಮಿನಲ್, ಮೋಟಾರು ವಾಹನ ಅಪಘಾತ ಪರಿಹಾರ ಹಾಗೂ ಕೌಟುಂಬಿಕ ಪ್ರಕರಣಗಳನ್ನು ಇತ್ಯರ್ಥಪಡಿಸ 'ಲಾಗುತ್ತದೆ.

ಎನ್.ಐ. ಆಕ್ಟ್ (ಚೆಕ್ ಬೌನ್ಸ್) ವಿಶೇಷ ಲೋಕ ಅದಾಲತ್: ನೆಗೋಷಿಯೇಬಲ್ ಇನ್‌ಸ್ಟುಮೆಂಟ್ಸ್ ಕಾಯ್ದೆ (ಸೆಕ್ಷನ್ 138 - ಚೆಕ್ ಬೌನ್ಸ್) ಪ್ರಕರಣಗಳ ಶೀಘ್ರ ವಿಲೇವಾರಿಗಾಗಿ ವಿಶೇಷ ಕರಡು ಸಿದ್ಧಪಡಿಸಲಾಗಿದ್ದು, 18-07-2026 ಮತ್ತು 21-11-2026 ರಂದು (ಜುಲೈ ಮತ್ತು ನವೆಂಬರ್ ತಿಂಗಳ 3 ನೇ ಶನಿವಾರ) ವಿಶೇಷ ಲೋಕ ಅದಾಲತ್‌ಗಳನ್ನು ನಡೆಸಲಾಗುತ್ತದೆ.

ಸಮಾಧಾನ ಸಮಾರೋಹ - 2026 (ಸುಪ್ರೀಂ ಕೋರ್ಟ್ ವಿಶೇಷ ಲೋಕ್-ಅದಾಲತ್): ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ, ಜಿಲ್ಲೆಗೆ ಸಂಬಧಿಸಿದ ಹಾಗೂ ಸುಪ್ರೀಂ ಕೋರ್ಟ್ನಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮಧ್ಯಸ್ಥಿಕೆ ಮುಖಾಂತರ ಬಗೆಹರಿಸಿಕೊಳ್ಳಲು ಆಗಸ್ಟ್ 21, 22 ಮತ್ತು 23 ರಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲೂಕು ಕಾನೂನು ಸೇವಾ ಸಮಿತಿಗಳಲ್ಲಿ ವಿಶೇಷ ಲೋಕ್-ಅದಾಲತ್ ವ್ಯವಸ್ಥೆ ಮಾಡಲಾಗಿದೆ. ಈ ಪ್ರಕರಣಗಳಿಗೆ ಸಮಾಧಾನ ಸಮಾರೋಹ' ಅಡಿಯಲ್ಲಿ ವಿಶೇಷ ಆದ್ಯತೆ ನೀಡಲಾಗುವುದು.

★ಇತ್ಯರ್ಥಪಡಿಸಬಹುದಾದ ಪ್ರಕರಣಗಳ ವಿವರ:★

ಚೆಕ್ ಅಮಾನ್ಯ ಪ್ರಕರಣಗಳು: ಎನ್.ಐ. ಆಕ್ಟ್ ಸೆಕ್ಷನ್ 138ರ ಅಡಿಯಲ್ಲಿನ ಚೆಕ್ ಬೌನ್ಸ್ ಪ್ರಕರಣಗಳು.

ಬ್ಯಾಂಕ್ ಮತ್ತು ಹಣ ವಸೂಲಾತಿ: ಬ್ಯಾಂಕ್ ಸಾಲ ಮರುಪಾವತಿ ಹಾಗೂ ಬ್ಯಾಂಕೇತರ ಹಣಕಾಸು ಸಂಸ್ಥೆಗಳ ವಿವಾದಗಳು. ಸಿವಿಲ್ ವಿವಾದಗಳು: ಆಸ್ತಿ ವಿಭಜನೆ, ಒಪ್ಪಂದದ ಉಲ್ಲಂಘನೆ, ಬಾಡಿಗೆ ವಿವಾದಗಳು ಮತ್ತು ಇತರ ಸಿವಿಲ್ ಕೇಸ್‌ಗಳು. ಮೋಟಾರು ವಾಹನ ಅಪಘಾತ: ಅಪಘಾತ ಪರಿಹಾರ ಕೋರಿ ವಿಮಾ ಕಂಪನಿಗಳ ವಿರುದ್ಧ ಸಲ್ಲಿಸಲಾದ ಪ್ರಕರಣಗಳು.

ಕೌಟುಂಬಿಕ ಕಲಹಗಳು: ವಿಚ್ಛೇದನವನ್ನು ಹೊರತುಪಡಿಸಿ, ಜೀವನಾಂಶ ಹಾಗೂ ದಂಪತಿಗಳ ಪುನರ್ ಮಿಲನಕ್ಕೆ ಸಂಬಧಿಸಿದ ಪ್ರಕರಣಗಳು.

ಸಾರ್ವಜನಿಕ ಸೌಲಭ್ಯಗಳು: ವಿದ್ಯುತ್, ನೀರು ಸರಬರಾಜು ಬಿಲ್ ಹಾಗೂ ದೂರಸಂಪರ್ಕ ಇಲಾಖೆಗೆ ಸಂಬಧಿಸಿದ ವಿವಾದಗಳು.

ಸಾರ್ವಜನಿಕರಿಗೆ ದೊರೆಯುವ ಮುಖ್ಯ ಸೌಲಭ್ಯಗಳು ಮತ್ತು ಮಾಹಿತಿ: ಲೋಕ್ ಅದಾಲತ್‌ನಲ್ಲಿ ಪಾಲ್ಗೊಳ್ಳುವ ಕಕ್ಷಿದಾರರಿಗೆ ಕಾನೂನು ಪ್ರಾಧಿಕಾರವು ಹಲವು ಪ್ರಮುಖ ಸೌಲಭ್ಯಗಳನ್ನು ಕಲ್ಪಿಸಿದೆ.

ನ್ಯಾಯಾಲಯದ ಶುಲ್ಕ ಮರುಪಾವತಿ: ಲೋಕ ಅದಾಲತ್‌ನಲ್ಲಿ ಪ್ರಕರಣಗಳು ಸೌಹಾರ್ದಯುತವಾಗಿ ಇತ್ಯರ್ಥವಾದರೆ, ಸಾರ್ವಜನಿಕರು ನ್ಯಾಯಾಲಯಕ್ಕೆ ಈಗಾಗಲೇ ಪಾವತಿಸಿರುವ ಸಂಪೂರ್ಣ ನ್ಯಾಯಾಲಯದ ಶುಲ್ಕವನ್ನು ಮರಳಿ ನೀಡಲಾಗುವುದು.

ಗ್ರೀನ್ ಪಾರ್ಕ್ ಉದ್ಯಾನವನ ವೀಕ್ಷಿಸಿದ ಎಂಎಲ್ಸಿ ಶ್ರೀಶರಣಗೌಡ ಪಾಟೀಲ್ ಬಯ್ಯಾಪುರ

ಲಿಂಗಸಗೂರು.

ಪಟ್ಟಣದ ಪುರಸಭೆ ವ್ಯಾಪ್ತಿಯಲ್ಲಿ ಹುಲಿಗುಡ್ಡದ ಸುಮಾರು 1.80 ರೂ ಕೋಟಿ ವೆಚ್ಚದಲ್ಲಿ ನಿರ್ಮಾಣ ಹಂತದಲ್ಲಿರುವ ಗ್ರೀನ್ ಗಾರ್ಡನ್ ಉದ್ಯಾನವನ ಅಭಿವೃದ್ಧಿಯ ಕಾಮ ಗಾರಿಯನ್ನು ವಿಧಾನ ಪರಿಷತ್ತ ಸದಸ್ಯರಾದ ಶ್ರೀ ಶರಣಗೌಡ ಪಾಟೀ ಲ ಬಯ್ಯಾ ಪುರ ಸೋಮವಾ ರದಂದು ಅಧಿಕಾ ರಿಗಳೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀ ಲಿಸಿದರು.



ಕಾಮಗಾರಿಯು ವಿವಿಧ ಹಂತಗಳನ್ನು ವೀಕ್ಷಿಸಿದ ಬಳಿಕ ಅಧಿಕಾರಿಗಳೊಂದಿಗೆ ಚರ್ಚಿಸಿದ ಗ್ರೀನ್ ಗಾರ್ಡನ್ ಉದ್ಯಾನವನ ಮನರಂಜನೆ ಹಾಗೂ ಪರಿಸರ ಸಂರಕ್ಷಣೆಗೆ ಪೂರಕವಾಗಿರುವ ಮಹತ್ವದ ಯೋಜನೆಯಾಗಿದೆ ಎಂಬುದಾಗಿ ಹೇಳಿದರು. ಉದ್ಯಾನವನ್ನು ಗುಣಮಟ್ಟದ ಕಾಮಗಾರಿಯೊಂದಿಗೆ ಅಭಿವೃದ್ಧಿಪಡಿಸಿ ನಿಗದಿತ ಅವಧಿ ಒಳಗೆ ಪೂರ್ಣಗೊಳಿಸಬೇಕೆಂದು ಹೇಳಿದರು ಕಾಮಗಾರಿಯ ವಿವರ ವಾಕಿಂಗ್ ಟ್ರ್ಯಾಕ್ ಕುಳಿತುಕೊಳ್ಳುವ ವ್ಯವಸ್ಥೆ ಮಕ್ಕಳ ಆಟದ ಪರಿಕರಗಳು ಮಕ್ಕಳು ಹಾಗೂ ಯುವಕರಿಗೆ ವಿವಿಧ ಆಟಿಕೆಯ ಮೂಲ ಸೌಕರ್ಯಗಳು ಹಿರಿಯ ನಾಗರಿಕರಿಗೆ ವಿಶ್ರಾಂತಿ ಹಾಗೂ ಮನೋರಂಜನ ಕೇಂದ್ರವಾಗಿ ರೂಪಗೊಳ್ಳಬೇಕೆಂದು ತಿಳಿಸಿದರು .

ಈ ವೇಳೆ ಅರಣ್ಯ ಸಂರಕ್ಷಣಾಧಿಕಾರಿ ಸುರೇಶ ಬಾಬು ವಲಯ ಅರಣ್ಯ ಅಧಿಕಾರಿ ಸುಭಾಷ ಚಂದ್ರ ನಾಯಕ ನಗರ ಯೋಜನಾ ಪ್ರಾಧಿಕಾರ'ದ' ಅಧ್ಯಕ್ಷ ಭೂಪನಗೌಡ ಕರಡಕಲ್ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಪಾಮಯ್ಯ ಮುರಾರಿ ಟಿಎಪಿಎಂಎಸ್‌ನ ಅಧ್ಯಕ್ಷರಾದ ಶಶಿಧರ್ ಪಾಟೀಲ್ ಆಶಿಹಾಳ. ಸೋಮಶೇಖರ ಐದನಾಳ. ಬಸವರಾಜ ಗೌಡ ಗಣೇಕಲ್. ಪ್ರಮೋದ್ ಕುಲಕರ್ಣಿ. ಜಗದೀಶ ಪಾಟೀಲ.ಪ್ರಕಾಶ ಕುರಿ.ಅನಿಷ ಪಾಶ.ಸಿದ್ದಪ್ಪ ಪರಂಗಿ. ವಿಧಾನ ಪರಿಷತ್ತು ಆಪ್ತ ಕಾರ್ಯದರ್ಶಿ ಚೆನ್ನಾರೆಡ್ಡಿ ಬಿರಾದಾರ. ಉಪಸ್ಥಿತರಿದ್ದರು.



ಡಾಕ್ಟರ್ ಎಸ್ ಪಿ ಬಾಲಸುಬ್ರಮಣ್ಯಂ ರವರ ಜನ್ಮದಿನೋತ್ಸವ ಅಂಗವಾಗಿ ಪಂಡಿತ್ ಸಿದ್ದರಾಮ ಬೆಂಬಲದಿನ್ನಿ ರಂಗ ಮಂದಿರ ರಾಯಚೂರ್ ನಲ್ಲಿ ರಾಗ ತರಂಗಿಣಿ ಮೆಲೋಡಿಸ್ ಹಾಗೂ ಶ್ರೀ ಸ್ಟಾರ್ ಗೋಲ್ಡ್ ಕಂಪನಿ ಅರ್ಪಿಸಿರುವ ನಾ ಹಾಡಲು ನೀವು ಹಾಡಬೇಕು ಕಾರ್ಯಕ್ರಮದಲ್ಲಿ ರಾಗ ತರಂಗಣಿ ಮುಖ್ಯಸ್ಥರಾದ ಶ್ರೀ ಡಿ ವೀರೇಶ್ ಕುಮಾರ್ ವಕೀಲರು ಹಾಗೂ ಅವರ ತಂಡದವರಿಂದ ಡಾಕ್ಟರ್ ಭಾಸ್ಕರ್ ಬಾಬು ರಾಜ್ಯ ಕಾರ್ಯದರ್ಶಿಗಳು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಕಾರ್ಮಿಕ ವಿಭಾಗ ಇವರನ್ನು ಶಾಲೋಧಿಸಿ ಉಮಾಲೆ ಹಾಕಿ ಸನ್ಮಾನಿಸಿದರು

ನಕಲಿ ವಾರಸುದಾರರ ವಿರುದ್ಧ ಕ್ರಮಕ್ಕೆ ಒತ್ತಾಯ

ಸಿಂಧನೂರು : ಜವಳಗೆರೆ ಗ್ರಾಮದ ಸಿದ್ದಲಿಂಗಯ್ಯ ಗಂಡ ವೆಂಕಟರಾವ್ ಅವರ ಹೆಚ್ಚುವರಿ ಭೂಮಿ ಪ್ರಕರಣ ಸಂಖ್ಯೆ. ಟು ಸಿಕ್ಸ್ ಫೋರ್ ಒನ್ ಅನ್ನು ಕಳೆದ 45 ವರ್ಷಗಳಿಂದ ವಿಚಾರಣೆಗೆ ಕೈಗೆತ್ತಿಕೊಳ್ಳದೆ ಬಾಕಿ ಉಳಿಸಿರುವ. ಸಿಂಧನೂರು ಭೂ ನ್ಯಾಯ ಮಂಡಳಿ ತಕ್ಷಣ ಮರು ವಿಚಾರಣೆ ನಡೆಸಿ ಇತ್ಯರ್ಥ ಪಡಿಸಬೇಕು ಎಂದು. ಸಿ ಪಿ ಐ (ಎಂಎಲ್). ರೆಡ್ ಸ್ಟಾರ್ ಹಾಗೂ ಕರ್ನಾಟಕ ರೈತ ಸಂಘ ಆಗ್ರಹಿಸಿದೆ. ಈ ಕುರಿತು ಭೂ ನ್ಯಾಯಮಂಡಳಿ ಅಧ್ಯಕ್ಷರು ಹಾಗೂ ಲಿಂಗಸುಗೂರು ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿ ಮಾತನಾಡಿದ ಪಕ್ಷದ ರಾಜ್ಯ ಸಮಿತಿ ಸದಸ್ಯ. ಎಂ ಗಂಗಾಧರ್. ಸಿದ್ದಲಿಂಗಮ್ಮ ಅವರು 1981- 82 ರಲ್ಲಿ 1069 ಎಕರೆ ಭೂಮಿಯನ್ನು ಘೋಷಿಸಿಕೊಂಡಿದ್ದು. ಭೂ ನ್ಯಾಯ ಮಂಡಳಿಯೂ 54 ಎಕರೆ ಭೂಮಿಯನ್ನು ಉಳಿಸಿ ಉಳಿದ. 1069 ಎಕರೆ 32 ಗುಂಟೆಯನ್ನು ಹೆಚ್ಚುವರಿ ಭೂಮಿ ಎಂದು ಘೋಷಿಸಿತ್ತು. ಬಳಿಕ ಹೈಕೋರ್ಟ್ ಪ್ರಕರಣವನ್ನು ಮರು ವಿಚಾರಣೆಗೆ ಕಳುಹಿಸಿದರು ನಾಲ್ಕು ದಶಕಗಳಿಗೂ ಹೆಚ್ಚು ಕಾಲ ವಿಚಾರಣೆ ನಡೆಸದೆ ಬಾಕಿ ಇಡಲಾಗಿದೆ ಎಂದು ಆರೋಪಿಸಿದರು. ಸಿದ್ದಲಿಂಗಮ್ಮ ಅವರಿಗೆ ಯಾವುದೇ ವಾರಸುದಾರರಿಲ್ಲ ಎಂದು ಘೋಷಣಾ ಪತ್ರದಲ್ಲಿ ಉಲ್ಲೇಖವಿದ್ದರೂ. ಕೆಲವರು ಅಕ್ರಮವಾಗಿ ವಾರಸುದಾರರೆಂದು ಹೇಳಿಕೊಂಡು ಭೂಮಿಯನ್ನು ತಮ್ಮ ವಶಕ್ಕೆ ಪಡೆದು ಸಾಗುವಳಿ ಮಾಡುತ್ತಿದ್ದಾರೆ.



ಅಲ್ಲದೆ ಭೂ ಸುಧಾರಣೆ ಕಾಯ್ದೆಯ ನಿಯಮಗಳನ್ನು ಉಲ್ಲಂಘಿಸಿ ಭೂಮಿಯನ್ನು ತಮ್ಮ ಕುಟುಂಬದವರ ಹೆಸರಿಗೆ ವರ್ಗಾಯಿಸಿ ಮಾರಾಟ ಮಾಡಿದ್ದಾರೆ ಎಂದು ದೂರಿದರು. ಕರ್ನಾಟಕ ಸರ್ಕಾರದ ಹೆಸರಿನಲ್ಲಿರುವ ಕೆಲವು ಭೂಮಿಗಳನ್ನು ಭೂಹಿನರಿಗೆ ಹಂಚಿಕೆ ಮಾಡುವಂತೆ ಹಲವು ಬಾರಿ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಅಧಿಕಾರಿಗಳು ಕ್ರಮ ಕೈಗೊಂಡಿಲ್ಲ ಈ ಹಿನ್ನಲೆಯಲ್ಲಿ ಭೂಹಿನರು ಭೂಮಿಯನ್ನು ಸಾಗುವಳಿ ಮಾಡಿದಾಗ ನಕಲಿ ವಾರಸುದಾರರ ಪರವಾಗಿ ಕ್ರಮ ಕೈಗೊಳ್ಳಲಾಗಿದೆ ಎಂದು ಅವರು ಆರೋಪಿಸಿದರು.

ಹೆಚ್ಚುವರಿ ಭೂಮಿ ಪ್ರಕರಣವನ್ನು ಉದ್ದೇಶಪೂರ್ವಕವಾಗಿ ವಿಳಂಬ ಗೊಳಿಸಲಾಗುತ್ತಿದೆ ಎಂಬ ಅನುಮಾನ ವ್ಯಕ್ತಪಡಿಸಿದ. ಗಂಗಾಧರ್ 1069. ಎಕರೆ ಮೂವತ್ತೆರಡು ಗುಂಟೆ ಹೆಚ್ಚುವರಿ ಭೂಮಿಯ ಸಂಪೂರ್ಣ ಪ್ರಕರಣವನ್ನು ತುರ್ತಾಗಿ ವಿಚಾರಣೆ ನಡೆಸಿ ಸರ್ಕಾರದ ವಶಕ್ಕೆ ಪಡೆಯಬೇಕು ಹಾಗೂ ಈ ಹೆಚ್ಚುವರಿ ಭೂಮಿಯನ್ನು ಭೂಹಿನರಿಗೆ ಹಂಚಿಕೆ ಮಾಡಬೇಕು ಎಂದು ಒತ್ತಾಯಿಸಿದರು.

ಮನವಿಯನ್ನು ಶಿರಸ್ತೆದಾರ್ ಅಂಬಾದಾಸ ಅವರ ಮೂಲಕ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರೈತ ಸಂಘದ ತಾಲೂಕ ಉಪಾಧ್ಯಕ್ಷ ಹನುಮಂತಪ್ಪ ಗೋಡಿಹಾಳ. ಜಿಲ್ಲಾ ಸಮಿತಿ ಸದಸ್ಯ ಹೆಚ್ ಆರ್ ಹೊಸಮನಿ. ಮುದಿಯಪ್ಪ. ನರಸಪ್ಪ ಕಟ್ಟಿಮನಿ. ಲಿಂಗಪ್ಪ ಚಿಕ್ಕಬೇರಗಿ. ಸಂಗಪ್ಪ. ಹಾಗೂ ರಾಜಶೇಖರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಶಿಕ್ಷಕರ ನೇಮಕಾತಿಗೆ ಅಗ್ರಹ



ಕಳೆದ ಹತ್ತು ವರ್ಷಗಳಿಂದ ಕಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರ ನೇಮಕಾತಿ ಆಗಿಲ್ಲ ಸರ್ಕಾರಿ ಶಾಲೆಗಳಲ್ಲಿ 79,486 ಶಿಕ್ಷಕರ ಹುದ್ದೆಗಳು ಖಾಲಿ ಇದ್ದು ಸರ್ಕಾರ ನೇಮಕಾತಿಗೆ ಮುಂದಾಗುತ್ತಿಲ್ಲ ಉತ್ತರ ಕರ್ನಾಟಕದ ಬಹುತೇಕ ಭಾಗಗಳಲ್ಲಿ ಸೊನ್ನೆ ಶಿಕ್ಷಕರ ಶಾಲೆಗಳಿವೆ ಗುಣಮಟ್ಟದ ಶಿಕ್ಷಣ ಸಿಗುತ್ತಿಲ್ಲ ಕಾಯಂ ಶಿಕ್ಷಕರ ನೇಮಕಾತಿ ಆಗುತ್ತಿಲ್ಲ ಪಾಲಕರು ಸರ್ಕಾರಿ ಶಾಲೆಗೆ ಮಕ್ಕಳನ್ನು ಕಳಿಸಲು ಹಿಂದೇಟು ಹಾಕುತ್ತಿದ್ದಾರೆಅಶಿಕ್ಷಣ ಇಲಾಖೆ ವಾಸ್ತವಿಕ ಸ್ಥಿತಿಯನ್ನು ಮರೆಮಾಚಿ ಫಲಿತಾಂಶವನ್ನು ಪ್ರಕಟಿಸುತ್ತಿದೆ

ಹೊಸದಾಗಿ ಕರ್ನಾಟಕ ಪಬ್ಲಿಕ್ ಶಾಲೆ ತಂದು ಗ್ರಾಮ ಪಂಚಾಯಿತಿಗೆ ಒಂದು ಶಾಲೆ ಎಂದು ಇನ್ನುಳಿದ ತೋಟದ ಶಾಲೆಗಳನ್ನು ನಿಷ್ಕ್ರಿಯಗೊಳಿಸುತ್ತಿದೆ ಈ ರೀತಿ ಆದರೆ ಸಂವಿಧಾನದ ಆರ್ಟಿಕಲ್ 21 ಎ ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆ ಉಲ್ಲಂಘನೆ ಆಗುತ್ತಿದೆ ಮೂಲಭೂತ ಸೌಲಭ್ಯಗಳನ್ನು ಕೊಡುವುದರ ಜೊತೆಗೆ ಕನಿಷ್ಠ 30,000 ಶಿಕ್ಷಕರ ನೇಮಕಾತಿಗೆ ತಕ್ಷಣ ಮುಂದಾಗ ಬೇಕೆಂದು ಮಾನ್ಯ ಸರ್ಕಾರಕ್ಕೆ ಒತ್ತಾಯ ಮಾಡುತ್ತೇವೆ.

ನೇಮಕಾತಿಗೆ ಸರ್ಕಾರ ಮುಂದಾಗದಿದ್ದರೆ ರಾಜ್ಯದಾದ್ಯಂತ ಎರಡು 2 ಶಿಕ್ಷಕ ಆಕಾಂಕ್ಷಿಗಳು ನಿರುದ್ಯೋಗಿಗಳಾಗಿದ್ದಾರೆ ಉಗ್ರ ಹೋರಾಟಕ್ಕೆ ಕರೆ ಕೊಡಲಾಗುವುದು ಎಂದು ಉತ್ತರ ಕರ್ನಾಟಕದ ನಾಗರಿಕ ಸಂಘದ ಅಧ್ಯಕ್ಷರಾದ ಡಾ. .. ಅವಟಿ,ಆ ನೋಟ್ರಿ ಸಂಘದ ಅಧ್ಯಕ್ಷರು ಹಾಗೂ ಖ್ಯಾತ ವಕೀಲರಾದ ಚನ್ನಬಸಪ್ಪ ಬಾಗೇವಾಡಿ, ವಕೀಲರಾದ ಸುನಿಲ್ ಕಾಂತ್ ಹೇಳವ.ರ್ಆ ಮಕ್ಕಳ ಗುಣಾತ್ಮಕ ಶಿಕ್ಷಣ ಮತ್ತು ಶಿಕ್ಷಕರ ಸಮನ್ವಯ ವೇದಿಕೆಯ ಬೆಂಗಳೂರು (ಸಂಘ) ಅಧ್ಯಕ್ಷರಾದ ಲಕ್ಷ್ಮಿಕಾಂತ್ .ಟಿ ಸದಸ್ಯರಾದ ಕುಮಾರ್ ನಾಯಕ ಪತ್ರಿಕಾಗೋಷ್ಠಿಯಲ್ಲಿ ಒತ್ತಾಯಿಸಿದರು

ದಾವಣಗೆರೆ: ಮಹಿಳೆ ಮೇಲೆ ಗ್ಯಾಂಗ್ ರೇಪ್ ; 10 ಆರೋಪಿಗಳ ಬಂಧನ

ದಾವಣಗೆರೆ,ಜೂ.09-

ದಾವಣಗೆರೆ ಜಿಲ್ಲೆಯಲ್ಲಿ ಸಮಾಜ ತಲೆತಗ್ಗಿಸುವಂತ ಕೃತ್ಯ ನಡೆದಿದೆ. ಹತ್ತು ಜನ ಆರೋಪಿಗಳು 41 ವರ್ಷದ ಮಹಿಳೆ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿರುವ ಆರೋಪ ಕೇಳಿಬಂದಿದೆ.

ಈ ಕುರಿತು ಸಂತ್ರಸ್ತ ಮಹಿಳೆಯು ಬಸವಾಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಪೊಲೀಸರು ಆರೋಪಿಗಳನ್ನು ಬಂಧಿಸಿ, ವಿಚಾರಣೆಗೊಳಪಡಿಸಿದ್ದಾರೆ.

ಗ್ರಾಮದ ಹೊರವಲಯದಲ್ಲಿನ ತೋಟದಲ್ಲಿ ಆರೋಪಿಗಳು ಮಹಿಳೆ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿರುವ ಕುರಿತು ಪ್ರಕರಣ ದಾಖಲಾಗಿದೆ ಎಂದು ಎಸ್ಪಿ ಶೇಖರ್ ಹೆಚ್ ಟಿ ಅವರು ಮಾಹಿತಿ ನೀಡಿದ್ದಾರೆ.

ತಳವಾರ ಸಮಾಜಕ್ಕೆ ಕಾನೂನಬದ್ಧ ನ್ಯಾಯ ಒದಗಿಸಲು ಹಿಂದೇಟು ಹಾಕುತ್ತಿರುವ ಅಧಿಕಾರಿಗಳ ಮೇಲೆ ಕ್ರಮಕ್ಕೆ ತಳವಾರ ಸಮಾಜ ಆಗ್ರಹ



ಅಫಜಲಪೂರ:ತಾಲೂಕು ದಂಡಾಧಿಕಾರಿಗಳ ಮುಖಾಂತರ ಸರಕಾರಕ್ಕೆ ಹಾಗೂ ರಾಜ್ಯಪಾಲರಿಗೆ ತಳವಾರ ಪರಿವಾರದವರಿಗೆ ಕಾನೂನು ಬದ್ದವಾಗಿ ಎಸ್.ಟಿ ಪ್ರಮಾಣ ಪತ್ರ ನೀಡುವಂತೆ ರಾಷ್ಟ್ರಪತಿಗಳು ಹಾಗೂ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಸುದ್ದಿಗಾರರೊಂದಿಗೆ ಮಾತನಾಡಿದ ಪರಿಶಿಷ್ಟ ಪಂಗಡ ಸಮಾಜ ಸೇವಾ ಸಾಂಸ್ಕೃತಿಕ ಸಂಘದ ಜಿಲ್ಲಾಧ್ಯಕ್ಷರಾದ ಅಂಬಣ್ಣ ನಾಯ್ಕೊಡಿ ಭಾರತ ಸಂವಿಧಾನದ ಪ್ರಕಾರ ಕಲಬುರಗಿಯ ಜಿಲ್ಲೆಯ ಅಫಜಲಪೂರ ತಾಲೂಕಿನ ತಳವಾರ ಸಮಾಜದ ಜನಾಂಗದರಾಗಿದ್ದು, ಭಾರತ ಸಂವಿಧಾನವು ನೀಡಿರುವ ಸಮಾನತೆ, ಸಾಮಾಜಿಕ ನ್ಯಾಯ ಹಾಗೂ ಮೀಸಲಾತಿಯ ಹಕ್ಕುಗಳ ರಕ್ಷಣೆಯನ್ನು ಕೋರಿ ಈಗಾಗಲೇ ಹತ್ತು ಹಲವು ಬಾರಿ ಮನವಿ ಸಲ್ಲಿಸುತ್ತಿದ್ದೇವೆ.

ತಳವಾರ ಸಮಾಜಕ್ಕೆ ಸಂಬಂಧಿಸಿದ ಜಾತಿ ಪ್ರಮಾಣಪತ್ರಗಳ ಕುರಿತು ರಾಜ್ಯ ಸರ್ಕಾರ, ಕೇಂದ್ರ ಸರ್ಕಾರ ಮತ್ತು ನ್ಯಾಯಾಲಯಗಳು ನೀಡಿರುವ ನಿರ್ದೇಶನಗಳ ಪ್ರಕಾರ ಅರ್ಜಿದಾರರ ಅರ್ಜಿಗಳನ್ನು ಕಾನೂನುಬದ್ಧವಾಗಿ ಪರಿಶೀಲಿಸಿ ಸಮಯೋಚಿತವಾಗಿ ತೀರ್ಮಾನಿಸುವುದು ಕಂದಾಯ ಇಲಾಖೆಯ ಕರ್ತವ್ಯವಾಗಿದೆ.

ಆದರೆ, ಅಫಜಲಪುರ ತಾಲ್ಲೂಕಿನ ತಹಶೀಲ್ದಾರ ಗ್ರೇಡ್-2 ಶರಣಬಸಪ್ಪ ಹೊಸಮನಿ ಅವರು ತಳವಾರ ಸಮಾಜದ ಅನೇಕ ಅರ್ಜಿಗಳನ್ನು ಅನಗತ್ಯವಾಗಿ ವಿಳಂಬಗೊಳಿಸುತ್ತಿದ್ದು, ಅರ್ಜಿದಾರರಿಗೆ ನ್ಯಾಯಯುತ ನಿರ್ಧಾರ ನೀಡದೆ ಕರ್ತವ್ಯಲೋಪ ಎಸಗುತ್ತಿದ್ದಾರೆ ಎಂಬ ಗಂಭೀರ ಆರೋಪಗಳು ಉದ್ಭವಿಸಿವೆ.

ಅಫಜಲಪೂರ ತಾಲೂಕಿನ ಗ್ರೇಡ್-2 ತಹಸೀಲ್ದಾರರಾದ ಶರಣಬಸಪ್ಪ ಹೊಸಮನಿ ಅವರು ಸಂವಿಧಾನ ಕಾನೂನು ನಿಯಮಗಳು ಉಲ್ಲಂಘಿಸಿ ಕರ್ತವ್ಯ ಲೋಪ ಎಸಗಿ ಸುಮಾರು ಎರಡು ವರ್ಷದಿಂದ ತಳವಾರ ಜಾತಿಯವರಿಗೆ ಪರಿಶಿಷ್ಟ ಪಂಗಡ ಜಾತಿ ಪ್ರಮಾಣ ಪತ್ರ ನಿಡದೆ ತಡೆ ಹಿಡಿದು ವಿನಾ ಕಾರಣ ಅರ್ಜಿಗಳನ್ನು ರದ್ದು ಪಡಿಸಿರುವದರಿಂದ ತನಿಖೆ ಹಾಗೂ ವಿಚಾರಣೆಗೆ ಆದೇಶಿಸಿ ಕೂಡಲೆ ಅಮಾನತ್ತು ಮಾಡಬೇಕೆಂದು ಕೋರಲಾಗಿದೆ ಎಂದರು.

ಇದೆ ಸಂದರ್ಭದಲ್ಲಿ ತಳವಾರ ಸಮಾಜದ ಮುಖಂಡರಾದ ಪರಮೇಶ್ವರ ಜಮಾದಾರ,ಶರಣಪ್ಪ ಜಮಾದಾರ,ಗೌಡಪ್ಪ ನಾಯ್ಕೊಡಿ,ಭೀಮಾಶಂಕರ ಹಂಚನಾಳ,ಸೇರಿದಂತೆ ಹಲವರು ಉಪಸ್ಥಿತರಿದ್ದರು

ರಸ್ತೆ ಅಪಘಾತದಲ್ಲಿ ಗಾಯಾಳುಗಳನ್ನು ರಕ್ಷಿಸುವವರಿಗೆ ₹25 ಸಾವಿರ ಬಹುಮಾನ

ನವದೆಹಲಿ,ಜೂ.08-

ರಸ್ತೆ ಅಪಘಾತಗಳ ಮರಣ ಪ್ರಮಾಣವನ್ನು ಕಡಿಮೆ ಮಾಡುವ ಉದ್ದೇಶದಿಂದ ಕೇಂದ್ರ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯವು ಎರಡು ಹೊಸ ಯೋಜನೆಗಳನ್ನು ಜಾರಿಗೆ ತಂದಿದೆ. ಈ ಕುರಿತು ಸೋಮವಾರ ಘೋಷಿಸಿರುವ ಕೇಂದ್ರ ಸಚಿವ ನಿತಿನ್ ಗಡ್ಕರಿ, ಅಪಘಾತದ ವೇಳೆ ತಕ್ಷಣ ಸ್ಪಂದಿಸಿ ಜೀವ ಉಳಿಸುವ ಸಾರ್ವಜನಿಕರಿಗೆ ದೊಡ್ಡ ಮೊತ್ತದ ನಗದು ಬಹುಮಾನ ನೀಡುವುದಾಗಿ ತಿಳಿಸಿದ್ದಾರೆ.

ಈ ಯೋಜನೆಗಳ ಕುರಿತು ಮಾಧ್ಯಮಗಳ ಜೊತೆ ಮಾತನಾಡಿದ ಸಚಿವರು, ದೇಶದಲ್ಲಿ ಪ್ರತಿ ವರ್ಷ 1.8 ಲಕ್ಷ ಜನ ರಸ್ತೆ ಅಪಘಾತಗಳಲ್ಲಿ ಸಾಯುತ್ತಿದ್ದಾರೆ. 5 ಲಕ್ಷ ಅಪಘಾತಗಳು ಸಂಭವಿಸುತ್ತಿವೆ ಎಂದು ಏಮ್ಸ್ ವೈದ್ಯರ ನೇತೃತ್ವದ ಸಮಿತಿ ವರದಿ ನೀಡಿದೆ.

ಅಪಘಾತಕ್ಕೊಳಗಾ ದವರನ್ನು ತಕ್ಷಣ ಆಸ್ಪತ್ರೆಗೆ ಸೇರಿಸಿದರೆ ಶೇಕಡಾ 30ರಷ್ಟು ಜನರನ್ನು ಬದುಕಿಸಬಹುದು. ಅಂದರೆ, ಸುಮಾರು 50 ಸಾವಿರ ಜೀವಗಳನ್ನು ಉಳಿಸಬಹು ದಾಗಿದೆ ಎಂದು ತಿಳಿಸಿದರು.

ರಾಹವೀರ್ ಯೋಜನೆ: ರಸ್ತೆ ಅಪಘಾತ ಸಂಭವಿಸಿದಾಗ ಗಾಯಾಳುಗಳನ್ನು ರಕ್ಷಿಸಲು ರಾಹವೀರ್ ಎಂಬ ಯೋಜನೆಯನ್ನು ಪರಿಚಯಿಸಲಾಗಿದೆ. ಅಂದರೆ, ಅಪಘಾತ ಉಂಟಾದಾಗ ಅಲ್ಲಿದ್ದ ಇತರ ಜನರು ಗಾಯಾಳುಗಳನ್ನು ತಕ್ಷಣವೇ ಆಸ್ಪತ್ರೆಗೆ ಕರೆದೊಯ್ದರೆ ಅವರನ್ನು ರಾಹವೀರ್ ಎಂದು ಘೋಷಿಸಿ ಕೇಂದ್ರ ಸರ್ಕಾ ರದಿಂದ 25 ಸಾವಿರ ರೂಪಾಯಿ ಬಹುಮಾನ ನೀಡಲಾಗುವುದು ಎಂದು ಗಡ್ಕರಿ ಅವರು ತಿಳಿಸಿದರು.


₹1.5 ಲಕ್ಷದವರೆಗೆ ಉಚಿತ ತುರ್ತು ಚಿಕಿತ್ಸೆ : ತುರ್ತು ಚಿಕಿತ್ಸೆಗೆ ಹಣದ ಕೊರತೆ ಎದುರಾಗದಂತೆ ಸರ್ಕಾರ ಮಹತ್ವದ ಕ್ರಮ ಕೈಗೊಂಡಿದೆ. ಅದೇನೆಂದರೆ, ರಾಷ್ಟ್ರೀಯ ಹೆದ್ದಾರಿಯಿಂದ ಹಿಡಿದು ಪಾಲಿಕೆ ವ್ಯಾಪ್ತಿಗೆ ಬರುವ ರಸ್ತೆ ಸೇರಿ ಯಾವುದೇ ರಸ್ತೆಯಲ್ಲಿ ಅಪಘಾತ ಸಂಭವಿಸಿದರೂ, ಗಾಯಾಳುಗಳನ್ನು ಯಾವುದೇ ಆಸ್ಪತ್ರೆಗೆ ದಾಖಲಿಸಿದ್ದರೂ, ಮೊದಲ ಏಳು ದಿನಗಳ ಚಿಕಿತ್ಸಾ ವೆಚ್ಚವನ್ನು ಸರ್ಕಾರವೇ ಭರಿಸಲಿದೆ. ಗರಿಷ್ಠ 1.5 ಲಕ್ಷ ರೂಪಾಯಿವರೆಗಿನ ಆಸ್ಪತ್ರೆ ಬಿಲ್ ಅನ್ನು ಸರ್ಕಾರವೇ ನೇರವಾಗಿ ಪಾವತಿಸಲಿದೆ ಎಂದು ಸಚಿವರು ಮಾಹಿತಿ ನೀಡಿದರು.

ವಿಶ್ವದಲ್ಲಿಯೇ ಅತಿ ಹೆಚ್ಚು ರಸ್ತೆ ಅಪಘಾತಗಳು ಸಂಭವಿಸುತ್ತಿರು ವುದು ಭಾರತದಲ್ಲಿ. ಹೀಗಾಗಿ, ಸಾರ್ವಜನಿಕರು ಸಹಕರಿಸಿದರೆ ಅಮೂಲ್ಯ ಜೀವಗಳನ್ನು ಉಳಿಸಬಹುದು. ಈ ಯೋಜನೆಗೆ ಖಾಸಗಿ ವಲಯದ 'ರ್‍ಯಾಪಿಡೋ' ಸಂಸ್ಥೆ ಕೈಜೋಡಿಸಿದೆ ಎಂದು ಅವರು ತಿಳಿಸಿದರು.

ರೈಲ್ವೆ ಇಲಾಖೆಯಿಂದ ಸುರಕ್ಷತಾ ತಪಾಸಣೆ ಶುರು: ಮತ್ತೊಂದೆಡೆ, ಪ್ರಯಾಣಿಕರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ರೈಲ್ವೆ ಸಚಿವಾಲಯವು ಕಾರ್ಯಾಚರಣೆಯಲ್ಲಿರುವ ಎಲ್ಲ ರೈಲುಗಳನ್ನು ತಪಾಸಣೆ ನಡೆಸುವ ತುರ್ತು ಸುರಕ್ಷತಾ ಅಭಿಯಾನವನ್ನು ಜೂನ್ 7 ರಿಂದ ಆರಂಭಿಸಿದೆ. ಜೂನ್ 6 ರಂದು ಲುಧಿಯಾನದಲ್ಲಿ ನವದೆಹಲಿ -ಶ್ರೀ ಮಾತಾ ವೈಷ್ಣೋದೇವಿ ಕಟ್ರಾ ಸ್ಪೆಷಲ್ ರೈಲಿನ ಸ್ಲೀಪರ್ ಕೋಚ್ ನಲ್ಲಿ ಬಿರುಕು ಪತ್ತೆಯಾದ ಹಿನ್ನೆಲೆಯಲ್ಲಿ, ಎಲ್ಲಾ ರೈಲುಗಳ ಕೋಚ್‌ಗಳ ಸಮಗ್ರ ತಪಾಸಣೆಗೆ ಆದೇಶಿಸ ಲಾಗಿದೆ.

ಎಲ್ಲಾ ರೈಲ್ವೆ ವಲಯಗಳು ಮುಂದಿನ ಒಂದು ವಾರದೊಳಗೆ ರೈಲುಗಳ ಕೋಚ್‌ಗಳ ತಪಾಸಣೆ ನಡೆಸಬೇಕು. ತುಕ್ಕು ಹಿಡಿದಿರುವುದು ಮತ್ತು ಇತರ ದೋಷಗಳನ್ನು ಕಂಡುಬಂದಲ್ಲಿ ಗುರುತಿಸಿ, ಪರಿಹಾರ ಕಂಡುಕೊಳ್ಳಬೇಕು ಎಂದು ಆದೇಶದಲ್ಲಿ ಸೂಚಿಸಲಾಗಿದೆ.

ತೀವ್ರವಾಗಿ ತುಕ್ಕು ಹಿಡಿದ ಅಥವಾ ದೋಷವಿರುವ ಕೋಚ್‌ಗಳನ್ನು ತಕ್ಷಣವೇ ಸೇವೆಯಿಂದ ಹಿಂಪಡೆಯಬೇಕು. ರೈಲ್ವೆ ಮಂಡಳಿಯ ಹಿರಿಯ ಅಧಿಕಾರಿಗಳು ಈ ಸೂಪ -ರ್ಚೆಕ್ ನಡೆಸಲಿದ್ದಾರೆ. ತಪಾಸಣೆ ಗಾಗಿ ಎಂಡೋಸ್ಕೋಪಿ ಕ್ಯಾಮೆರಾ ಗಳು ಮತ್ತು ಅಲ್ಟ್ರಾಸಾನಿಕ್ ತಂತ್ರಜ್ಞಾ ನವನ್ನು ಬಳಸಲು ಸೂಚಿಸಲಾಗಿದೆ.



ಸಿರುಗುಪ್ಪ: ಚತನ್ ಷಾ ವಲಿ ಉರುಸ್ ಮುಬಾರಕ್

ಸಿರುಗುಪ್ಪ,ಜೂ.09-

ನಗರದ ಸೌದಾಗರ್ ಮೊಹಲ್ಲಾ ಸೌದಾಗರ್ ಮಸೀದಿಯ ಅಧ್ಯಕ್ಷರು ಮಕಾಂದಾರ್ ಮೆಹಬೂಬ್ ಬಾಷಾ ಇವರ ನಿವಾಸದಿಂದ ಸಂದಲ್ ಜುಲೂಸ್ ಹೊರಟು ಮುಖ್ಯರಸ್ತೆಗಳಿಂದ ದರ್ಗಾ ಆಸ್ತಾನಕ್ಕೆ ತಲುಪಿತು ಗಂಧ ಪುಷ್ಪ ಗಲಫ್ ಹೂ ಚಾದರ್ ಗಳೊಂದಿಗೆ ಖುರಾನ್ ಫಾತೇಹ ಓದಿಕೆ ಸಲಾತೋ ಸಲಾಂ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು ಉರುಸ್ ಕಮಿಟಿಯ ಪದಾಧಿಕಾರಿಗಳು ಸರ್ವರನ್ನು ಸ್ವಾಗತ ಬಯಸಿದರು

ಮೌಲಾನ ಹಾಜಿ ಅಬ್ದುಲ್ ಸಮದ್, ಸರ್ ಗುರು ಶೇಕ್ಷವಲಿ, ಹಾಜಿ ಆಲಂಬಾಷ ಸಾಬ್, ಎ.ಟಿ. ಸುಭಾನ್ ಸಾಬ್, ಹಾಜಿ ಎ.ಮೊಹಮ್ಮದ್ ಇಬ್ರಾಹಿಂ,ಎ. ಮೊಹಮ್ಮದ್ ನೌಷಾದ್ ಅಲಿ, ನಿಸ್ಸಾರ್ ಹಂಡಿ ಹುಸೇನ್, ಮಕಾಂದಾರ್ ಗೌಸಿ, ಮಕಾಂದರ್ ಯಾಸೀರ್ ನೂರಾರು ಭಕ್ತಾದಿಗಳು ಭಾಗವಹಿಸಿ ಜಿಯಾರತ್ ದರ್ಶನ ಪಡೆದರು ಸರ್ವರಿಗೂ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು



ರುದ್ರಪ್ಪ ಲಮಾಣಿ ಅವರಿಗೆ ಸಚಿವ ಸ್ಥಾನ ನೀಡಲು ಅಗ್ರಹ

ಲಿಂಗಸಗೂರು.ಜೂ.09-

ಇಂದು ರಾಯಚೂರು ಜಿಲ್ಲೆಯಲ್ಲಿ ಸಂಘಟನೆಯ ಜಿಲ್ಲಾ ಮಟ್ಟದ ಸಭೆಯನ್ನು ಮಾಡಲಾಯಿತು. ಈ ಸಭೆಯಲ್ಲಿ ಸನ್ಮಾನ್ಯ ಶ್ರೀ ರುದ್ರಪ್ಪ ಲಮಾಣಿ ಸಸಚಿವ ಸ್ಥಾನ ನೀಡಬೇಕೆಂದು ಜಿಲ್ಲಾ ಮಟ್ಟದ ಪ್ರತಿಭಟನೆ ನಡೆಸಬೇಕು ಎಂದು ಚರ್ಚೆ ಮಾಡಲಾಯಿತು.ಈ ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷರಾದ ಶ್ರೀ ಅಮರೇಶ್ ರಾಠೋಡ.. ಲಿಂಗಸುಗೂರು ತಾಲ್ಲೂಕಿನ ಅಧ್ಯಕ್ಷರಾದ ಶ್ರೀ ವೆಂಕಟೇಶ್ ಎನ್ ರಾಠೋಡ್ ಹಾಗೂ ರಾಜ್ಯ ಮುಖಂಡರು ಜಿಲ್ಲಾ ಮುಖಂಡರು ಮತ್ತು ಎಲ್ಲಾ ತಾಲೂಕಿನ ಸಂಘಟನೆಯ ಮುಖಂಡರು ಭಾಗವಹಿಸಿದ್ದರು.

ಡಿಸ್ಕ್ಲೈಮರ್:-ಈ ಪತ್ರಿಕೆಯಲ್ಲಿ ಪ್ರಕಟವಾಗುವ ಸುದ್ದಿ, ಅಭಿಪ್ರಾಯಗಳು, ಚಿತ್ರಗಳು ಹಾಗೂ ಮಾಹಿತಿಗಳು ವಿಶ್ವಾಸಾರ್ಹ ಮೂಲಗಳ ಆಧಾರದ ಮೇಲೆ ಸಾರ್ವಜನಿಕ ಹಿತಾಸಕ್ತಿ ಮತ್ತು ಜಾಗೃತಿಗಾಗಿ ಮಾತ್ರ ಪ್ರಕಟಿಸಲ್ಪಟ್ಟಿವೆ. ಯಾವುದೇ ವ್ಯಕ್ತಿ, ಸಂಸ್ಥೆ ಅಥವಾ ಸಮುದಾಯವನ್ನು ಅವಹೇಳನಗೊಳಿಸುವ, ಅವಮಾನ ಮಾಡುವ ಅಥವಾ ಖಾಸಗಿ ಹಕ್ಕಿಗೆ ಧಕ್ಕೆ ತರುವ ಉದ್ದೇಶ ಇಲ್ಲ.

ಕಲ್ಲೂರು ಬಳಿ ಕಾರು ಡಿಕ್ಕಿ ಹೊಡೆದು ನಾಲ್ಕು ಹಸುಗಳ ದುರ್ಮರಣ - ತಪ್ಪಿತಸ್ಥನ ವಿರುದ್ಧ ಕಠಿಣ ಕ್ರಮಕ್ಕೆ ಆಗ್ರಹ

ಸಿರವಾರ,ಜೂ.08-

ತಾಲೂಕಿನ ಕಲ್ಲೂರು ಗ್ರಾಮದಲ್ಲಿ ನೆನ್ನೆ ಸಂಜೆ ಸುಮಾರು 7:00 ಗಂಟೆಯ ವೇಳೆಗೆ ರಾಯಚೂರು -ಸಿಂಧನೂರು ಹೆದ್ದಾರಿಯ ಕಲ್ಲೂರು ಸಮೀಪ ದುರ್ಘಟನೆಯೊಂದು ಸಂಭವಿಸಿದೆ. ರಾಯಚೂರಿನ ಮಾರ್ವಾಡಿ ನಿವಾಸಿಯಾಗಿರುವ ವ್ಯಕ್ತಿಯೊಬ್ಬರು ನಿರ್ಲಕ್ಷ್ಯ ಹಾಗೂ ಅತಿವೇಗದಿಂದ ಕಾರು ಚಾಲನೆ ಮಾಡಿದ್ದು, ಮದ್ಯದ ಅಮಲಿನಲ್ಲಿದ್ದರೆಂದು ಸ್ಥಳೀಯರು ಆರೋಪಿಸಿದ್ದಾರೆ.



ಕಾರಿನಿಂದ ಡಿಕ್ಕಿ ಹೊಡೆದ ಪರಿಣಾಮ ನಾಲ್ಕು ಅಮೂಲ್ಯ ಹಸುಗಳು ಸ್ಥಳದಲ್ಲೇ ಸಾವನ್ನಪ್ಪಿವೆ. ಈ ಘಟನೆ ಬಡ ರೈತ ಕುಟುಂಬಗಳಿಗೆ ಅಪಾರ ಆರ್ಥಿಕ ನಷ್ಟ ಹಾಗೂ ನೋವುಂಟು ಮಾಡಿದೆ.

ಈ ಘಟನೆಯನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ, ತಪ್ಪಿತಸ್ಥ ವಾಹನ ಚಾಲಕನ ವಿರುದ್ಧ ಕಾನೂನುಬದ್ಧವಾಗಿ ಕಠಿಣ ಕ್ರಮ ಜರುಗಿಸಬೇಕು. ಜೊತೆಗೆ ಹಸುಗಳನ್ನು ಕಳೆದುಕೊಂಡ ರೈತರಿಗೆ ಸೂಕ್ತ ಪರಿಹಾರ ಹಾಗೂ ನ್ಯಾಯ ಒದಗಿಸಬೇಕು ಎಂದು ಪೊಲೀಸ್ ಇಲಾಖೆ ಹಾಗೂ ಜಿಲ್ಲಾಡಳಿತವನ್ನು ಆಗ್ರಹಿಸಲಾಗಿದೆ.



ಜಿಲ್ಲಾಧಿಕಾರಿಗಳು ಮತ್ತು ಪೊಲೀಸ್ ಇಲಾಖೆಯ ಅಧಿಕಾರಿಗಳು ಪ್ರಕರಣದ ಸಂಪೂರ್ಣ ತನಿಖೆ ನಡೆಸಿ, ಯಾವುದೇ ಒತ್ತಡಕ್ಕೆ ಮಣಿಯದೆ ತಪ್ಪಿತಸ್ಥನ ವಿರುದ್ಧ ಕಾನೂನು ಕ್ರಮ ಕೈಗೊಂಡು ಬಡ ರೈತರಿಗೆ ನ್ಯಾಯ ದೊರಕಿಸಿಕೊಡಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR